ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೯

**ಪಟ್ಟಿ – ೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನೆಯ ಅಧಿವೇಶನ**

**ಬುಧವಾರ, ದಿನಾಂಕ : ೧೧ನೇ ಮಾರ್ಚ್, ೨೦೨೦**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ಕೃಷಿ ಸಚಿವರು.

---

## ಬೀದರ್ ಜಿಲ್ಲೆಯಲ್ಲಿ ಕೊಳವೆ ಬಾವಿ ನಿಷೇಧಿಸಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೬ (೮೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲಾಧಿಕಾರಿಗಳು ದಿನಾಂಕ : ೧೫–೦೨–೨೦೨೦ರಂದು ನೋಟಿಸ್ ಹೊರಡಿಸಿ, ಜಿಲ್ಲೆಯಾದ್ಯಂತ ಹೊಸ ಕೊಳವೆ ಬಾವಿ ತೋಡುವುದನ್ನು ನಿಷೇಧಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರು ಯಾವ ಆಧಾರದ ಮೇಲೆ ನಿಷೇಧಿಸಲಾಗಿದೆ ;

(ಆ) ಈ ಆದೇಶದಿಂದ ಜಿಲ್ಲೆಯ ರೈತರು ಮತ್ತು ಜನ ಸಾಮಾನ್ಯರು ಪರದಾಡುವಂತೆ ಮಾಡಿರುವುದು ಸರಿಯಾದ ಕ್ರಮವೇ ; ಸರಿಯಲ್ಲದಿದ್ದರೆ ಈ ಆದೇಶ ಹೊರಡಿಸಿರುವ ಜಿಲ್ಲಾಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ; ಕೈಗೊಳ್ಳದಿದ್ದಲ್ಲಿ, ಇದಕ್ಕೆ ಸರ್ಕಾರದ ನಿಲುವೇನು ?

## ಬೀದರ್ ಜಿಲ್ಲೆಯ ವಸತಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೭ (೮೦೬) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯಲ್ಲಿ ಸೂರಿಲ್ಲದವರಿಗೆ ಎಷ್ಟು ವಸತಿ ಸೌಲಭ್ಯವನ್ನು ಒದಗಿಸಲಾಗಿದೆ ; ಇನ್ನು ಎಷ್ಟು ವಸತಿ ರಹಿತರಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆ ; ಬಂದಿದ್ದಲ್ಲಿ ಸರ್ಕಾರ

ತೆಗೆದುಕೊಂಡ ಕ್ರಮವೇನು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ರೈತರ ಸಮಸ್ಯೆ ಪರಿಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೮ (೮೦೭) ಮಾನ್ಯ ಕೃಷಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯ ರೈತರು ಅನಾವೃಷ್ಠಿಯಿಂದಾಗಿ ತೀವ್ರವಾಗಿ ಬಳಲುತ್ತಿದ್ದು, ಬೆಳೆ ಪರಿಹಾರ, ಗೊಬ್ಬರ, ಬೀಜ ವಿತರಣೆ, ಕೀಟನಾಶಕ ಮುಂತಾದ ಸಮಸ್ಯೆಗಳಿದ್ದು, ಈ ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಬೀದರ್ ಜಿಲ್ಲೆಯ ಎಸ್ ಸಿ ಪಿ/ಟಿ ಎಸ್ ಪಿ ಕಾಮಗಾರಿಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೯ (೮೦೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೬ ರಿಂದ ೨೦೧೯ರವರೆಗೆ ಜರುಗಿದ ಕಾಮಗಾರಿಗಳು ಯಾವುವು ; ಅವುಗಳನ್ನು ನಿಯಮಾನುಸಾರ ಮಾಡಲಾಗಿದೆಯೇ ;

(ಆ) ಈ ಕಾಮಗಾರಿಗಳಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ ;

(ಇ) ಇಲ್ಲದಿದ್ದಲ್ಲಿ, ಸರ್ಕಾರದ ಗಮನಕ್ಕೆ ತರದೇ ಇರುವುದಕ್ಕೆ ಯಾರು ಹೊಣೆಗಾರರಾಗಿರುತ್ತಾರೆ ? (ವಿವರವಾದ ಮಾಹಿತಿ ಒದಗಿಸುವುದು)

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರಿಗೆ ಒಂದು ವಿಶೇಷ ವೇತನ ಬಡ್ತಿ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫೭೦ (೮೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರು/ಸಿಬ್ಬಂದಿಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ಕುಮಾರ್ ನಾಯಕ್ ವರದಿ ಅನ್ವಯ ನೀಡಿದ ಒಂದು ವಿಶೇಷ ವೇತನ ಬಡ್ತಿಯನ್ನು ನೀಡುವ ಕಾರ್ಯ ಯಾವ ಹಂತದಲ್ಲಿದೆ ;

(ಆ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರ/ಸಿಬ್ಬಂದಿಗಳಿಗೆ ಒಂದು ವಿಶೇಷ ವೇತನ ಬಡ್ತಿಯನ್ನು ನೀಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ; ಯಾವ ಕಾರಣಕ್ಕಾಗಿ ಈ ಕಾರ್ಯ ವಿಳಂಬವಾಗಿದೆ ; ಇರುವ ಅಡೆತಡೆಗಳೇನು ;

(ಇ) ಯಾವ ಕಾಲಮಿತಿಯೊಳಗೆ ಈ ನೌಕರರಿಗೆ ಈ ಸೌಲಭ್ಯವನ್ನು ಒದಗಿಸಲಾಗುವುದು ; (ಸ್ಪಷ್ಟ ನಿಲುವಿನೊಂದಿಗೆ ವಿವರವನ್ನು ಒದಗಿಸುವುದು)

(ಈ) ಶಿಕ್ಷಣ ಇಲಾಖೆಯ ಶಿಕ್ಷಕರಿಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಡಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸೇವಾ ಸೌಲಭ್ಯಗಳು ಬೇರೆ ಬೇರೆ ಇವೆಯೇ ; ಇದ್ದಲ್ಲಿ, ಅವುಗಳ ವಿವರವನ್ನು ಸಂಪೂರ್ಣ ವಿವರದೊಂದಿಗೆ ಒದಗಿಸುವುದು ?

## ರಸ್ತೆ ಮತ್ತು ಸೇತುವೆ ಅಪೆಂಡಿಕ್ಸ್–ಇ ಭಾಗ–೨ರ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೧ (೮೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನಲ್ಲಿ ಅಪೆಂಡಿಕ್ಸ್–ಇ ಭಾಗ–೨ ರಲ್ಲಿ ಮೈತ್ರಿ ಸರ್ಕಾರದ ಅವಧಿಯಲ್ಲಿ ರೂ. ೫,೯೯೦.೨೦ ಕೋಟಿ ಅಂದಾಜು ಮೊತ್ತದ ಕಾಮಗಾರಿಗಳನ್ನು ಪಕ್ಷ ಬೇಧವಿಲ್ಲದೇ, ಎಲ್ಲಾ ವಿಧಾನ ಸಭಾ ಕ್ಷೇತ್ರಗಳಿಗೆ ವಿಂಗಡಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪೈಕಿ ಎಷ್ಟು ಮೊತ್ತದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ; (ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತದ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)

(ಇ) ಕೆಲವೊಂದು ವಿಧಾನಸಭಾ ಕ್ಷೇತ್ರಗಳ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯು ನೀಡಿರುವ ಟಿಪ್ಪಣಿ ಮೇರೆಗೆ ತಡೆ ಹಿಡಿದಿರುವುದು ನಿಜವೇ ; (ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತದ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)

(ಈ) ವಿಧಾನ ಮಂಡಲದ ಉಭಯ ಸದನಗಳಿಂದ ಅನುಮೋದನೆ ಪಡೆದ ಈ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯು ತಡೆ ಹಿಡಿಯಲು ಕಾರಣಗಳೇನು ;

(ಉ) ಈ ಕಾಮಗಾರಿಗಳನ್ನು ತಡೆ ಹಿಡಿದ ನಂತರ, ಆರ್ಥಿಕ ಇಲಾಖೆಯು ಪ್ರಸ್ತುತ ಸಾಲಿನಲ್ಲಿ ಕೆಲವೊಂದು ವಿಧಾನಸಭಾ ಸದಸ್ಯರ ಕ್ಷೇತ್ರಗಳಿಗೆ ಅನುದಾನ ನೀಡಿರುವುದು ನಿಜವೇ ? (ಮಂಜೂರು ನೀಡಲಾದ ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತದ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)

## ಗೇಣಿ ರಹಿತ ದೃಢೀಕರಣ ಪತ್ರದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೨ (೮೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಭೂ ಸುಧಾರಣಾ ಕಾಯಿದೆಯಡಿ ಈ ದಿನಾಂಕಕ್ಕೆ ನಮೂನೆ-೭ ಅಥವಾ ೪೮ರಲ್ಲಿ ಯಾವುದೇ ವ್ಯಕ್ತಿಯು ಈಗ ಗೇಣಿ ಅರ್ಜಿಯನ್ನು ದಾಖಲಿಸಲು ಅವಕಾಶವಿರುವುದಿಲ್ಲ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕರ್ನಾಟಕ ಭೂ ಸುಧಾರಣೆ ಕಾಯಿದೆಯಡಿ ಒಂದು ಗ್ರಾಮದ ಸ.ನಂ. ಜಮೀನಿನ ಗೇಣಿ ರಹಿತ ದೃಢೀಕರಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರ್‌ಗಳು ನೀಡುತ್ತಿದ್ದು, ಸದರಿ ದೃಢೀಕರಣ ಪತ್ರದ ಕೆಳಗೆ ಈ ದೃಢೀಕರಣ ಪತ್ರವು ಒಂದು ವರ್ಷದ ಅವಧಿಗೆ ಚಾಲ್ತಿಯಲ್ಲಿರುತ್ತದೆ ಎಂದು ನಮೂದಿಸಿ ನೀಡುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಗೇಣಿ ಅರ್ಜಿಗಳನ್ನು ದಾಖಲಿಸಲು ಈಗ ಅವಕಾಶ ಇಲ್ಲದೆ ಇರುವುದರಿಂದ ತಹಶೀಲ್ದಾರ್‌ರವರ ಕಛೇರಿಯಲ್ಲಿ ನೀಡುತ್ತಿರುವ

ಗೇಣಿ ರಹಿತ ದೃಢೀಕರಣ ಪತ್ರದ ಕೆಳಗೆ ಈ ದೃಢೀಕರಣ ಪತ್ರವು ಒಂದು ವರ್ಷ ಚಾಲ್ತಿಯಲ್ಲಿ ಇರುತ್ತದೆ ಎಂಬ ಷರತ್ತನ್ನು ತೆಗೆದುಹಾಕಲು ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರ ಕ್ರಮ ಜರುಗಿಸುವುದೇ ? (ಸ್ಪಷ್ಟ ಉತ್ತರ ನೀಡುವುದು)

## ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಕೆಲವು ಜಮೀನುಗಳ ಪರಭಾರೆ ನಿಷೇಧ) ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೩ (೮೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಕೆಲವು ಜಮೀನುಗಳ ಪರಭಾರೆ ನಿಷೇದ) ಕಾಯಿದೆ ೧೯೭೯ರಡಿಯಲ್ಲಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು ೧೯೬೯ರಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವ್ಯಕ್ತಿಗಳಿಗೆ ಮಂಜೂರಾದ ಜಮೀನುಗಳಿಗೆ ಅನ್ವಯಿಸುತ್ತದೆ ಎಂಬ ಅಂಶ ಸರ್ಕಾರದ ಗಮನದಲ್ಲಿದೆಯೇ ;

(ಆ) ಇಂತಹವರುಗಳಿಗೆ ಮಂಜೂರಾದ ಜಮೀನುಗಳ ಬಗ್ಗೆ ಕರ್ನಾಟಕ ಭೂ ಕಂದಾಯ ೧೯೬೪ರ ವಿಧಿ ೯೫(೨)ರ ಅಡಿಯಲ್ಲಿ ಭೂ ಪರಿವರ್ತನೆಗೆ ಒಬ್ಬ ವ್ಯಕ್ತಿಯು ಅರ್ಜಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಾಗ ಪಿ.ಟಿ.ಸಿ.ಎಲ್. ಕಾಯ್ದೆ ಉಲ್ಲಂಘನೆಯಾಗಿದೆಯೇ ಎಂಬ ಬಗ್ಗೆ ಉಪ ವಿಭಾಗಾಧಿಕಾರಿಗಳ ಕಛೇರಿಯಿಂದ ಹಿಂಬರಹ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕಾಗಿದ್ದು, ಕರ್ನಾಟಕ ಭೂ ಮಂಜೂರಾತಿ ನಿಯಮಗಳು ೧೯೬೯ರ ಅಡಿಯಲ್ಲಿ ಭೂಮಿ ಮಂಜೂರಾಗದೆ ಪಿತ್ರಾರ್ಜಿತ ಅಥವಾ ಸ್ವಂತ ಜಮೀನುಗಳನ್ನು

ಭೂ ಪರಿವರ್ತನೆ ಮಾಡಿಕೊಳ್ಳಲು ಅರ್ಜಿ ಸಲ್ಲಿಸುವಾಗ, ಜಿಲ್ಲಾಧಿಕಾರಿಗಳು ಇಂತಹ ಜಮೀನುಗಳಿಗೂ ಪಿ.ಟಿ.ಸಿ.ಎಲ್. ಕಾಯಿದೆಯಡಿ ಉಪವಿಭಾಗಾಧಿಕಾರಿಗಳಿಂದ ಹಿಂಬರಹ ಪಡೆದು ಲಗತ್ತಿಸಲು ನಿರ್ಬಂಧ ವಿಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಪಿತ್ರಾರ್ಜಿತ ಅಥವಾ ಸ್ವಂತ ಜಮೀನುಗಳಿಗೆ ಪಿ.ಟಿ.ಸಿ.ಎಲ್. ಹಿಂಬರಹ ಪಡೆದು ಲಗತ್ತಿಸಲು ನಿರ್ಬಂಧವನ್ನು ನಿಲ್ಲಿಸಿ, ವಿನಾಯಿತಿ ನೀಡಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನವನ್ನು ನೀಡುವುದೇ ? (ಸ್ಪಷ್ಟ ಉತ್ತರ ನೀಡುವುದು)

## ಪೋಡಿ ಮುಕ್ತ ಅಭಿಯಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೪ (೮೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರಖಾಸ್ತು ಮಂಜೂರಾದ ಅಂಶಿಕ ಜಮೀನುಗಳ ಖಾತೆದಾರರ ಪೋಡಿ ಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ಅಸಾಧ್ಯವಾಗಿದ್ದು, ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದಿರಲು ಕಾರಣಗಳೇನು ;

(ಆ) ಸಾಮಾನ್ಯ ಜನರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು ಪೋಡಿ ಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಗಿದೆ ; ಈ ಅಭಿಯಾನದಂತೆ ಮಂಡ್ಯ

ಜಿಲ್ಲೆಯಲ್ಲಿ ಭೂ–ಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ನಾಗಮಂಗಲ ತಾಲ್ಲೂಕಿನಲ್ಲಿ ಭೂಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪಹಣಿ ಪತ್ರ ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಲಂಬಾಣಿ ಸಮುದಾಯದ ಅಭಿವೃದ್ಧಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೫೭೫ (೮೬೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಲಂಬಣಿ ಸಮುದಾಯಕ್ಕೆ ೧೦೦ ಕೋಟಿ ಹಣ ಮೀಸಲಿಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಭರವಸೆ ಕೊಟ್ಟಿರುವುದು ನಿಜವೇ ;

(ಆ) ಸದರಿ ಸಮುದಾಯವು ಕರ್ನಾಟಕ ತಾಂಡ ಅಭಿವೃದ್ಧಿ ನಿಗಮಕ್ಕೆ ೩೦೦ ಕೋಟಿ ನೀಡಬೇಕು ಮತ್ತು ಬೇರೆ ಬೇರೆ ಯಾವ ಯಾವ ಬೇಡಿಕೆಗಳನ್ನು ಮುಂದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಇದರ ಸಂಬಂಧ ಸರ್ಕಾರದ ಸ್ಪಷ್ಟ ನಿಲುವೇನು ?

## ಕೆಲವು ಬುಡಕಟ್ಟು ಜನಾಂಗಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೫೭೬ (೮೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬುಡಕಟ್ಟು ಜನಾಂಗಗಳಾದ ಟೋಕರಿ ಕೋಳಿ, ಢೋರ ಕೋಳಿ, ಕೋಯಾ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕೆಂದು ಹಲವಾರು ಸಮುದಾಯದ ಸಂಘಟನೆಗಳು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಈ ಸಂಬಂಧ ಯಾವ ಕ್ರಮ ಕೈಗೊಂಡಿದೆ ;

(ಇ) ೧೯೫೦ರಲ್ಲಿ ಕೇಂದ್ರ ಸರ್ಕಾರದ ಜಾತಿ ಪಟ್ಟಿ ೨೨ ರಲ್ಲಿ ಪರಿಶಿಷ್ಟ ಪಂಗಡದಲ್ಲಿ ಈ ಮೇಲ್ಕಂಡ ಜನಾಂಗದವರನ್ನು ಸೇರಿಸಲಾಗಿದೆಯೇ ; ಹಾಗಿದ್ದರೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ;

(ಈ) ಸಂವಿಧಾನದ ಅನುಸೂಚಿತ ಬುಡಕಟ್ಟುಗಳ ಆದೇಶದಂತೆ ಇವರು ಪರಿಶಿಷ್ಟ ಪಂಗಡಕ್ಕೆ ಸೇರಿದವಾರಾಗಿದ್ದು, ಇವರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಉ) ಈ ಸಮಸ್ಯೆಯನ್ನು ಸರ್ಕಾರವು ಯಾವ ಕಾಲಮಿತಿಯೊಳಗೆ ಬಗೆಹರಿಸಿ ಅನುಕೂಲ ಮಾಡಿಕೊಡಲಿದೆ ? (ವಿವರವಾದ ಮಾಹಿತಿ ನೀಡುವುದು)

## ಬಳ್ಳಾರಿ–ಗಂಗಾ ಕಲ್ಯಾಣ ಹಾಗೂ ಇತರೆ ಯೋಜನೆಗಳ ಅನುಷ್ಠಾನ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೭೭ (೬೧೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಹಾಗೂ ಗಂಗಾ ಕಲ್ಯಾಣ ಮತ್ತು ಇನ್ನಿತರೆ ಯೋಜನೆಗಳ ಅರ್ಜಿ ಸಲ್ಲಿಸಿರುವ ಒಟ್ಟು ಫಲಾನುಭವಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸೂಕ್ತ ಫಲಾನುಭವಿಗಳನ್ನು ಗುರುತಿಸಿ ಅವರುಗಳಿಗೆ ನಿಗಮದ ವತಿಯಿಂದ ಸಹಾಯಧನವನ್ನು ನೀಡಲಾಗಿದೆಯೇ ; ಇದರಲ್ಲಿ ಅಕ್ರಮ ಜರುಗದಂತೆ ಹಾಗೂ ಸೂಕ್ತ ಫಲಾನುಭವಿಗಳಿಗೆ ಅನ್ಯಾಯವಾಗದಂತೆ ಸರ್ಕಾರವು ಯಾವ ರೀತಿ ಕ್ರಮಗಳನ್ನು ಕೈಗೊಂಡಿದೆ ;

(ಇ) ಈ ನಿಟ್ಟಿನಲ್ಲಿ ಆಯಾ ಜಿಲ್ಲೆಯ ಅಧಿಕಾರಿಗಳು ಸೂಕ್ತ ಫಲಾನುಭವಿಗಳನ್ನು ಗುರುತಿಸುವಲ್ಲಿ ಸಫಲರಾಗಿದ್ದಾರೆಯೇ ; ಇವರುಗಳು ಮೇಲ್ವಿಚಾರಣೆ ವಹಿಸುವವರು ಯಾರು ?

## ನೀಲಿ ಕ್ರಾಂತಿ ಯೋಜನೆ ಅನುಷ್ಠಾನ ಮತ್ತು ಪರಿಣಾಮ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೭೮ (೬೨೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ನೀಲಿ ಕ್ರಾಂತಿ ಯೋಜನೆಯಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ; ಈ ಯೋಜನೆಗೆ ಇದುವರೆವಿಗೂ ವೆಚ್ಚ ಮಾಡಲಾದ ಹಣ ಎಷ್ಟು ; (ವಿವರ ಒದಗಿಸುವುದು)

(ಆ) ಈ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಇ) ಈ ಯೋಜನೆಯಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಮೀನುಗಾರಿಕೆ ಅಭಿವೃದ್ಧಿ ಪಡಿಸಲಾಗಿದೆ ಹಾಗೂ ಪಡೆದ ಇಳುವರಿ ಹಾಗೂ ಗಳಿಸಿದ ಆದಾಯ ಎಷ್ಟು ?

## ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೭೯ (೬೨೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮಂಜೂರಾದ ಯೋಜನೆಗಳಾವುವು ; ನಿಗದಿಪಡಿಸಿರುವ ಗುರಿ ಎಷ್ಟು ; ಸಾಧನೆ ಎಷ್ಟು ;

(ಆ) ಈ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಯೋಜನೆವಾರು ಮಾಹಿತಿ ನೀಡುವುದು)

(ಇ) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ವಿವರ ; ನಿರ್ವಹಿಸಿದ ಸಂಸ್ಥೆ ಮತ್ತು ವೆಚ್ಚ ಮಾಡಿದ ಅನುದಾನದ ಮಾಹಿತಿ ನೀಡುವುದು ;

(ಈ) ಪೂರ್ಣಗೊಂಡ ಕಾಮಗಾರಿಗಳನ್ನು ಮೂರನೇ ವ್ಯಕ್ತಿಯಿಂದ ಪರಿಶೀಲನೆಗೆ ಒಳಪಡಿಸಲಾಗಿದೆಯೇ ; ಕಳಪೆ ಕಾಮಗಾರಿ ಕಂಡು ಬಂದಿದ್ದಲ್ಲಿ ಸಂಬಂಧಪಟ್ಟ ಗುತ್ತಿಗೆದಾರರ ಮೇಲೆ ಯಾವ ಕ್ರಮ ವಹಿಸಲಾಗಿದೆ ? (ವಿವರ ನೀಡುವುದು)

## ಪ್ರಕೃತಿ ವಿಕೋಪದಿಂದ ಹಾನಿ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೮೦ (೬೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಪ್ರಕೃತಿ ವಿಕೋಪದ ನಿರ್ವಹಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಈ ವರ್ಷದಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ಆಸ್ತಿಗಳ ಬಗ್ಗೆ ಸರ್ವೆ ಮಾಡಿಸಲಾಗಿದೆಯೇ ; ಎಷ್ಟು ಸಾರ್ವಜನಿಕ ಆಸ್ತಿ, ರೈತರ ಜಮೀನಿಗೆ ಹಾನಿಯಾಗಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹಾನಿಯಾದ ಜಮೀನಿನ ರೈತರಿಗೆ ಪರಿಹಾರ ಒದಗಿಸಲಾಗಿದೆಯೇ ; ಒದಗಿಸಿದ್ದಲ್ಲಿ, ಎಷ್ಟು ಒದಗಿಸಲಾಗಿದೆ; (ವಿವರ ನೀಡುವುದು)

(ಈ) ಹೊಸದಾಗಿ ಮನೆ ನಿರ್ಮಿಸಿ ಕೊಡಲು ಸರ್ಕಾರ ರೂಪಿಸಿರುವ ನಿಯಮ/ಮಾರ್ಗಸೂಚಿಗಳೇನು ;

(ಉ) ರಾಜ್ಯದಲ್ಲಿ ಪ್ರಸ್ತುತ ವರ್ಷದಲ್ಲಿ ಪ್ರಕೃತಿ ವಿಕೋಪದಿಂದ ಮನೆ ಕಳೆದುಕೊಂಡಿರುವ ಕುಟುಂಬಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಮನೆ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಎಷ್ಟು ಸಮಯದೊಳಗೆ ಸಂತ್ರಸ್ಥರಿಗೆ ಸರ್ಕಾರದಿಂದ ಮನೆಗಳನ್ನು ನಿರ್ಮಿಸಿ ಕೊಡಲಾಗುವುದು ?

## ರಾಯಚೂರು ಜಿಲ್ಲೆಯಲ್ಲಿ SHDP ಯೋಜನೆಯಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳ ಕುರಿತು

**ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೧ (೮೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಿಂದ ಹಾದು ಹೋಗುವ NH-167 ಕೃಷ್ಣಾ ನದಿ ಮೇಲೆ ಸೇತುವೆ ನಿರ್ಮಾಣ ಮಾಡುವ ಕಾಮಗಾರಿಗೆ ಸರ್ಕಾರದಿಂದ ಮಂಜೂರಾತಿ ಆಗಿದೆಯೇ ; ಹಾಗಿದ್ದಲ್ಲಿ, ಕಾಮಗಾರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಈ ಕಾಮಗಾರಿಯ ಅಂದಾಜು ಮೊತ್ತ ಎಷ್ಟು ;

(ಆ) ರಾಯಚೂರು ಜಿಲ್ಲೆಗೆ ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನವರೆಗೂ SHDP ಯೋಜನೆ ಅಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳು ಯಾವುವು; ಇದರ ಅಂದಾಜು ಮೊತ್ತ ಎಷ್ಟು;

(ಇ) ಮಾನ್ವಿ ತಾಲ್ಲೂಕಿಗೆ ೨೦೧೭–೧೮ ರಿಂದ ೨೦೧೮–೧೯ರಲ್ಲಿ SHDP ಯೋಜನೆ ಅಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳ ವಿವರ ನೀಡುವುದು ; ಇದರ ಅಂದಾಜು ಮೊತ್ತ ಎಷ್ಟು ?

## ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಆಶ್ರಯ ಕಾಲೋನಿ ಹೌಸಿಂಗ್ ಬೋರ್ಡ್ ಕುರಿತು

**ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೨ (೮೩೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಆಶ್ರಯ ಕಾಲೋನಿಗಳಲ್ಲಿ ಹಾಗೂ ಸ್ಥಳಾಂತರ ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಹೌಸಿಂಗ್ ಬೋರ್ಡ್‌ನಿಂದ ನಿರ್ಮಾಣಗೊಂಡಿರುವ ಮನೆಗಳು ಎಷ್ಟು; ಹಂಚಿಕೆಯಾದ ಮನೆಗಳು ಎಷ್ಟು ; ನಿರ್ಮಾಣ ಮಾಡಿರುವ ಮನೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸಿರಿಧಾನ್ಯಗಳ ಉತ್ಪಾದನೆ ಹೆಚ್ಚಿಸಲು ರೈತರಿಗೆ ನೀಡಬೇಕಾದ ಸೌಲಭ್ಯಗಳ ಬಗ್ಗೆ

**ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೩ (೮೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಸಿರಿದಾನ್ಯಗಳ ಉತ್ಪಾದನೆ ಹೆಚ್ಚಿಸಲು ರೈತರಿಗೆ ನೀಡಿರುವ ಸೌಲಭ್ಯಗಳೇನು ;

(ಆ) ರೈತರು ನೀರನ್ನು ಮಿತವಾಗಿ ಬಳಕೆ ಮಾಡಲು ಸಬ್ಸಿಡಿ ಮೂಲಕ ವಿತರಿಸುವ ಹನಿ ನೀರಾವರಿ ಪದ್ಧತಿ ಯೋಜನೆಯನ್ನು ಎಲ್ಲಾ ವರ್ಗದ ರೈತರಿಗೆ ವಿತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇಲ್ಲದೇ ಇದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಯಲ್ಲಿರುವ ವಸತಿನಿಲಯಗಳ ಸ್ವಂತ ಕಟ್ಟಡಗಳ ಬಗ್ಗೆ

**ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೪ (೮೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಒಟ್ಟು ವಸತಿ ನಿಲಯಗಳು ಎಷ್ಟು ; ಸದರಿ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಸದರಿ ವಸತಿ ನಿಲಯಗಳಲ್ಲಿ ಇರುವ ಖಾಯಂ ವಾರ್ಡ್‌ನ್‌ಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡ ಹೊಂದಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ವಸತಿ ನಿಲಯಗಳಲ್ಲಿ ಮಂಜೂರಾಗಿರುವ ಸಂಖ್ಯೆಗಳಿಗಿಂತ ಹೆಚ್ಚು ವಿದ್ಯಾರ್ಥಿಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ಗ್ರಾಮಗಳನ್ನು ಸಂಪೂರ್ಣ ಪೋಡಿ ಮುಕ್ತ ಮಾಡುವ ಕುರಿತು

**ಶ್ರೀ ಎನ್.ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೫ (೮೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಮಿನಿವಿಧಾನ ಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಭೂಮಾಪಕ ಇಲಾಖೆಯಲ್ಲಿ ಸರ್ವೇಯರ್ ಕೊರತೆಯಿಂದ ರೈತರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಧಿಕಾರಿ ಹುದ್ದೆಗಳು ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ಜಿಲ್ಲೆಯಲ್ಲಿರುವ ಸಂಪೂರ್ಣ ಪೋಡಿ ಮುಕ್ತ ಗ್ರಾಮಗಳು ಎಷ್ಟು ?

## ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ವಸತಿ ಯೋಜನೆ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೮೬ (೮೫೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ವತಿಯಿಂದ ಯಾವ ಯಾವ ವಸತಿ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ ;

(ಆ) ಅನುದಾನದ ಕೊರತೆಯಿಂದ ಈ ವಸತಿ ಯೋಜನೆಗಳ ಪ್ರಗತಿ ಕುಂಠಿತವಾಗಿ ಗ್ರಾಮೀಣ ಜನರಿಗೆ ವಸತಿಗಳು ಸಿಗುವುದು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನೆರೆ ಹಾವಳಿ ಮುಂತಾದ ಪ್ರಕೃತಿ ವಿಕೋಪಗಳಿಂದ ವಸತಿ ಹೀನರಾದವರಿಗೆ ಮತ್ತು ಇತರ ವಸತಿ ಹೀನರಿಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ತ್ವರಿತಗತಿಯಲ್ಲಿ ಹೆಚ್ಚಿನ ಅನುದಾನ ಒದಗಿಸುವುದೇ ?

## ಅನುಸೂಚಿತ ಜಾತಿ ಮತ್ತು ಪಂಗಡಗಳ ವಿವರ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೮೭ (೮೫೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಲ್ಲಿ ಎಷ್ಟು ಜಾತಿಗಳು ಬರುತ್ತವೆ ; ಅವು ಯಾವುವು ;

(ಆ) ಸಂವಿಧಾನ ಜಾರಿಗೆ ಬಂದ ಸಮಯದಲ್ಲಿ ಮೂಲಭೂತವಾಗಿ ಯಾವ ಯಾವ ಜಾತಿಗಳನ್ನು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿಸಲಾಗಿತ್ತು ; ನಂತರ ಹೊಸದಾಗಿ ಯಾವ ಯಾವ ಜಾತಿಗಳನ್ನು ಸೇರಿಸಲಾಯಿತು ;

(ಇ) ಅನುಸೂಚಿತ ಜಾತಿಗಳಲ್ಲಿ ಅಸ್ಪೃಶ್ಯ (untouchables) ಜಾತಿಗಳು ಯಾವುವು ; ಅಸ್ಪೃಶ್ಯರಲ್ಲದ ಜಾತಿಗಳು (touchables) ಯಾವುವು? (ಪಟ್ಟಿಯೊಂದಿಗೆ ವಿವರ ನೀಡುವುದು)

## ಪ್ರವಾಹ ಪರಿಸ್ಥಿತಿಯಿಂದಾದ ಹಾನಿ ಹಾಗೂ ಪರಿಹಾರದ ಬಗ್ಗೆ

**ಶ್ರೀ ಕೆ.ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೮ (೭೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಅಧಿಕ ಮಳೆ ಕಾರಣವೂ ಸೇರಿದಂತೆ ಪ್ರವಾಹ ಪರಿಸ್ಥಿತಿ ಎದುರಿಸಿದ ಪ್ರದೇಶಗಳು ಯಾವುವು ; ಪ್ರತ್ಯೇಕವಾಗಿ ವಿವರವಾದ ಮಾಹಿತಿ ಒದಗಿಸುವುದು ;

(ಆ) ಪ್ರವಾಹ ಪರಿಸ್ಥಿತಿಯಿಂದ ಆಗಿರುವ ಆರ್ಥಿಕ ನಷ್ಟ ಮತ್ತು ಇತರೆ ಹಾನಿಗಳ ಅಂದಾಜು ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ ಪ್ರತ್ಯೇಕವಾಗಿ ಜಿಲ್ಲಾವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಇ) ಪ್ರವಾಹ ಪರಿಸ್ಥಿತಿಯಿಂದಾದ ನಷ್ಟವನ್ನು ಸರಿದೂಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು ಏನು ; ಪ್ರಸ್ತುತ ಈ ಪರಿಸ್ಥಿತಿ ನಿಭಾಯಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಪರಿಹಾರ ರೂಪದ ಕ್ರಮಗಳು ಏನು ; (ವಿವರ ಒದಗಿಸುವುದು)

(ಈ) ಇದುವರೆವಿಗೂ ನೆರೆಗೆ ತುತ್ತಾದ ಆಯಾ ಪ್ರದೇಶಗಳ ಅಭಿವೃದ್ಧಿಗೆ ಖಾಸಗಿ ಸಂಸ್ಥೆಗಳು ನೀಡಿರುವ ದೇಣಿಗೆ ಎಷ್ಟು; ಸದರಿ ದೇಣಿಗೆಯನ್ನು ವಿನಿಯೋಗಿಸಿದ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು ?

## ವಸತಿ ಯೋಜನೆಗಳಡಿ ಹಂಚಿಕೆಯಾಗಿರುವ ಮನೆಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೯ (೮೨೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ಇಲಾಖೆಯಿಂದ ವಿವಿಧ ಯೋಜನೆಗಳಡಿ ಹಾಸನ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ ಹಂಚಿಕೆಯಾದ ಮನೆಗಳೆಷ್ಟು ; ಈ ಮನೆಗಳನ್ನು ಪಡೆದಿರುವ ಫಲಾನುಭವಿಗಳ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿವಾರು ವಿವರ ನೀಡುವುದು ;

(ಆ) ಹಂಚಿಕೆಯಾಗಿರುವ ಮನೆಗಳಿಗೆ ಜನವರಿ–೨೦೨೦ರವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; ಅನುದಾನ ಮಂಜೂರಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು ; (ಫಲಾನುಭವಿವಾರು ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿವಾರು ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ನಿರ್ವಸತಿಕರ ಸಂಖ್ಯೆ ಎಷ್ಟು ; ಈ ನಿರ್ವಸತಿಕರಿಗೆ ಯಾವ ಕಾಲಮಿತಿಯೊಳಗೆ ವಸತಿ ಕಲ್ಪಿಸಲಾಗುವುದು ? (ನಿರ್ವಸತಿಕಾರರ ಹೆಸರು, ಗ್ರಾಮ ಹೋಬಳಿ, ತಾಲ್ಲೂಕು ಮತ್ತು ಜಾತಿವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೦ (೮೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) P R A M C (Planning and Road Asset Management bÀentre ) ಯೋಜನೆಯಲ್ಲಿ ದಿನಾಂಕ: ೦೧.೦೪.೨೦೧೬ ರಿಂದ ೩೧.೧೦.೨೦೧೯ವರೆಗೆ ಚನ್ನರಾಯಪಟ್ಟಣ ಲೋಕೋಪಯೋಗಿ ಉಪವಿಭಾಗ ವ್ಯಾಪ್ತಿಯಲ್ಲಿ ಕೈಗೊಂಡಿರುವ ಮತ್ತು ಮುಕ್ತಾಯಗೊಳಿಸಿರುವ ಕಾಮಗಾರಿಗಳ ವಿವರ ನೀಡುವುದು; ಈ ಕಾಮಗಾರಿಗಳಿಗೆ ನಿಗದಿಪಡಿಸಿರುವ

ಮೊತ್ತ, ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರ ವಿವರವನ್ನು ಅಳತೆ ಪುಸ್ತಕದ (ಎಂ.ಬಿ.ಬುಕ್) ದಾಖಲೆಗಳೊಂದಿಗೆ ನೀಡುವುದು ;

(ಆ) ದಿನಾಂಕ: ೦೧.೦೪.೨೦೧೬ ರಿಂದ ೩೧.೧೦.೨೦೧೯ರವರೆಗೆ ಚನ್ನರಾಯಪಟ್ಟಣ ಲೋಕೋಪಯೋಗಿ ಉಪವಿಭಾಗ ವ್ಯಾಪ್ತಿಯಲ್ಲಿ ಮಾನ್ಯುಯಲ್ ಟೆಂಡರ್ ಮೂಲಕ ರೂ.೫.೦೦ ಲಕ್ಷ ಮೊತ್ತದ ಒಳಗೆ ಕೈಗೊಂಡಿರುವ ಮತ್ತು ಮುಕ್ತಾಯಗೊಳಿಸಿರುವ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು ; ಈ ಕಾಮಗಾರಿಗಳಿಗೆ ನಿಗದಿಪಡಿಸಿರುವ ಮೊತ್ತ, ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರ ವಿವರವನ್ನು ಎಸ್.ಬಿ.ಆರ್. ವಹಿಯ ದಾಖಲೆಗಳೊಂದಿಗೆ ನೀಡುವುದು ?

## ಕೃಷಿ ಯಂತ್ರೋಪಕರಣ ಮತ್ತು ವಾಹನ ಖರೀದಿಗೆ ನೀಡುವ ಸಹಾಯಧನದ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೧ (೮೨೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಕೃಷಿ ಇಲಾಖೆ ವತಿಯಿಂದ ರೈತರಿಗೆ ಒದಗಿಸುವ ಕೃಷಿ ಯಂತ್ರೋಪಕರಣ ಹಾಗೂ ವಾಹನ ಖರೀದಿಗೆ ಸಹಾಯಧನ ನೀಡಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಿಂದ ಎಷ್ಟು ಸಹಾಯ ಧನವನ್ನು ಎಷ್ಟು ಕೃಷಿಕರಿಗೆ ವಿತರಿಸಲಾಗಿದೆ ; (ವರ್ಷವಾರು, ಫಲಾನುಭವಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಯಾವ ಮಾದರಿಯಲ್ಲಿ ಹಾಗೂ ಯಾವ ಮಾನದಂಡದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ ? (ವಿವರ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೨ (೮೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು ; (ವಿವರ ನೀಡುವುದು)

(ಆ) ಈ ಯೋಜನೆಗಳಡಿ ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯ ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಿದ ಹಾಗೂ ಖರ್ಚಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು ?

## ರಾಷ್ಟ್ರೀಯ ಹೆದ್ದಾರಿ ೬೬ರ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೩ (೬೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ ೬೬ರ ಬೈಂದೂರು–ತಲಪಾಡಿ, ಹೆದ್ದಾರಿ ಕಾಮಗಾರಿಗಳು ಪೂರ್ಣಗೊಳ್ಳವುದು ಯಾವಾಗ ; ಕಾಮಗಾರಿ ಪೂರ್ಣಗೊಳ್ಳುವ ವರ್ಷ ಯಾವುದು ; ನಿಗದಿಗೊಳಿಸಿದ ಸಮಯ ಎಷ್ಟು ; (ವಿವರ ನೀಡುವುದು)

(ಆ) ರಾಷ್ಟ್ರೀಯು ಹೆದ್ದಾರಿ ೬೬ರಲ್ಲಿ ಎಷ್ಟು ಫ್ಲೈಓವರ್‌ಗಳು ರಚನೆಗೊಳ್ಳಲಿದೆ ; ಪೂರ್ಣಗೊಂಡ ಫ್ಲೈಓವರ್‌ಗಳಾವುವು ; (ವಿವರ ನೀಡುವುದು)

(ಇ) ಪಂಪ್‌ವೆಲ್ ಫ್ಲೈಓವರ್ ಪೂರ್ಣಗೊಂಡಿದೆಯೇ ; ಈ ಕಾಮಗಾರಿ ಯಾವಾಗ ಪ್ರಾರಂಭಗೊಂಡಿತ್ತು ; ವಿವರ ನೀಡುವುದು ; ಈ ಫ್ಲೈಓವರ್ ಅವೈಜ್ಞಾನಿಕವಾಗಿ ನಿರ್ಮಾಣಗೊಂಡಿದ್ದು, ಅಪಘಾತಗಳು ಸಂಭವಿಸುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಹೆದ್ದಾರಿ ೬೬ರ ಕಾಮಗಾರಿ ಯಾವ ಗುತ್ತಿಗೆದಾರರಿಗೆ ಒದಗಿಸಲಾಗಿದೆ; ಕಳಪೆ ಕಾಮಗಾರಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿ ೧೬೯ರ ಗುರುಪುರ ಸೇತುವೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೫೪ (೬೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ ೧೬೯ರ ಗುರುಪುರದಲ್ಲಿ ಪಾಲ್ಗುಣಿ ನದಿಗೆ ಅಡ್ಡಲಾಗಿ ಹೊಸ ಸೇತುವೆ ನಿರ್ಮಾಣ ಕಾಮಗಾರಿ ಎಂದು ಪೂರ್ಣಗೊಳ್ಳುವುದು ; ಇದಕ್ಕೆ ತಗಲುವ ವೆಚ್ಚ ಎಷ್ಟು; (ವಿವರ ನೀಡುವುದು)

(ಆ) ಸೇತುವೆಗೆ ಸಂಪರ್ಕ ರಸ್ತೆ ಕಲ್ಪಿಸಲು ಭೂಮಿಯನ್ನು ಸ್ವಾಧೀನಕ್ಕೆ ಪಡೆಯಲಾಗಿದೆಯೇ ; ಕಾಮಗಾರಿ ವಿಳಂಬಗೊಳ್ಳುವುದರಿಂದ ಜನಾಕ್ರೋಶ ಉಂಟಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಹೆದ್ದಾರಿ ೧೬೯ರ ಗುರುಪುರ ಪಾಲ್ಗುಣಿ ನದಿಗೆ ಅಡ್ಡಲಾಗಿ ಪ್ರಸ್ತುತ ಇರುವ ಸೇತುವೆಯು ತೀರಾ ಅಪಾಯದಲ್ಲಿದ್ದು, ಹೊಸ ಸೇತುವೆ ನಿರ್ಮಾಣ ವಿಳಂಬಗೊಳ್ಳುತ್ತಿರುವುದನ್ನು ಸರ್ಕಾರ ಗಮನಿಸಿ ಕೂಡಲೇ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡುವುದೇ ? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿ ೧೬೯ರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೫೫ (೬೪೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ೧೬೯ರ ಮಂಗಳೂರಿನಿಂದ ಮೂಡಬಿದ್ರೆ ರಸ್ತೆಯಲ್ಲಿ ಪ್ರತಿ ನಿತ್ಯ ಅಪಘಾತಗಳು ಸಂಭವಿಸುತ್ತಿದ್ದು, ೧೫ ವರ್ಷಗಳಿಂದ ರಸ್ತೆ ಕಾಮಗಾರಿ ನಡೆಯದೇ ಇರುವುದರಿಂದ ಜನ ಆಕ್ರೋಶಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೆದ್ದಾರಿ ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ; ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಹೆದ್ದಾರಿ ವಿಸ್ತರಣೆಗೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; ರಸ್ತೆಗೆ ಹೋಗುವ ಭೂಮಿಯನ್ನು ಗುರುತಿಸಲಾಗಿದೆಯೇ; (ವಿವರ ನೀಡುವುದು)

(ಇ) ಹೆದ್ದಾರಿ ೧೬೯ ಪೂರ್ಣಗೊಂಡು ವಾಹನ ಸಂಚಾರಕ್ಕೆ ಬಿಡುಗಡೆ ಮಾಡುವುದು ಯಾವಾಗ ; ಇದಕ್ಕೆ ತಗಲುವ ಸಮಯ ಎಷ್ಟು; (ವಿವರ ನೀಡುವುದು)

(ಈ) ಭೂ ಸ್ವಾಧೀನಗೊಳಿಸಲು ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಗಿರಿಜನ ಅಭಿವೃದ್ಧಿ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೯೬ (೬೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಕೊರಗ ಕುಟುಂಬಗಳಿವೆ ; ಗಿರಿಜನ ಅಭಿವೃದ್ಧಿ ಯೋಜನೆ ಅನ್ವಯ ಯಾವ ಯೋಜನೆಗಳನ್ನು ಕೊರಗ ಕುಟುಂಬಗಳಿಗೆ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಕೊರಗ ಕುಟುಂಬಗಳು ಮತ್ತು ಸಂತತಿ ನಶಿಸಿ ಹೋಗುತ್ತಿದ್ದು, ಆ ಕುಟುಂಬಗಳಲ್ಲಿ ಪಡೆಯುತ್ತಿರುವ ಶಿಕ್ಷಣದ ಬಗ್ಗೆ ಮತ್ತು ಉದ್ಯೋಗ ಒದಗಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ಜಿಲ್ಲಾವಾರು ವಿವರ ನೀಡುವುದು)

(ಇ) ೧೦ ನೇ ತರಗತಿಯಿಂದ ಪದವಿಪೂರ್ವ ಮತ್ತು ಪದವಿ ವ್ಯಾಸಂಗ ಮಾಡಿದ ಕೊರಗ ಕುಟುಂಬದ ವಿವರ ನೀಡುವುದು;

(ಈ) ಕೊರಗ ಮಕ್ಕಳಿಗೆ ಉದ್ಯೋಗ ಒದಗಿಸಲು ಸರ್ಕಾರದ ಮುಂದಿರುವ ವಿಶೇಷ ಯೋಜನೆಗಳು ಯಾವುವು ; ಇದ್ದರೆ, ವಿವರ ನೀಡುವುದು; ಕೊರಗ ಸಮಾಜದ ಜನ ಜೀವನದ ಬಗ್ಗೆ ವರದಿ ಪಡೆಯಲಾಗಿದೆಯೇ ? (ವಿವರ ನೀಡುವುದು)

## ರಾಜ್ಯ ಹೆದ್ದಾರಿಗಳಲ್ಲಿ ಟೋಲ್ ಅಳವಡಿಕೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೭ (೬೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿಗಳಲ್ಲಿ ಟೋಲ್ ಅಳವಡಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದರೆ ಯಾವುವು ; (ವಿವರ ನೀಡುವುದು)

(ಆ) ರಾಜ್ಯ ಹೆದ್ದಾರಿಗಳ ನಿರ್ವಹಣೆಗೆ ಇಲಾಖೆಯು ಪ್ರತಿವರ್ಷ ವಿನಿಯೋಗಿಸುವ ಹಣವೆಷ್ಟು ; (ವಿವರ ನೀಡುವುದು)

(ಇ) ೨೦೧೮–೧೯, ೨೦೧೯–೨೦೨೦ ನೇ ಸಾಲಿನಲ್ಲಿ ಎಷ್ಟು ಜಿಲ್ಲಾ ರಸ್ತೆಗಳನ್ನು ರಾಜ್ಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿವೆ ; (ವಿವರ ನೀಡುವುದು)

(ಈ) ವರ್ಷವೊಂದಕ್ಕೆ ಸರ್ಕಾರ ಎಷ್ಟು ರಾಜ್ಯ ಹೆದ್ದಾರಿಗಳನ್ನು ಸ್ಥಾಪಿಸಲು ಗುರಿ ಹೊಂದಿದೆ ; ಖಾಸಗಿ ಸಹಭಾಗಿತ್ವಕ್ಕೆ ಸರ್ಕಾರದ ಮುಂದಿರುವ ಯೋಜನೆಗಳು ಯಾವುವು ? (ವಿವರ ನೀಡುವುದು)

## ರುದ್ರಭೂಮಿ ಹಾಗೂ ವಿದ್ಯುತ್ ಚಿತಾಗಾರಗಳ ವಿವರ ನೀಡುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೫೯೮ (೮೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ಇರುವ ಒಟ್ಟು ರುದ್ರಭೂಮಿ ಹಾಗೂ ವಿದ್ಯುತ್ ಚಿತಾಗಾರಗಳ ಸಂಖ್ಯೆ ಎಷ್ಟು ; ಈ ವಿದ್ಯುತ್ ಚಿತಾಗಾರಗಳಲ್ಲಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವ ಚಿತಾಗಾರಗಳ ಸಂಖ್ಯೆ ಎಷ್ಟು ;

(ಆ) ಬೆಂಗಳೂರಿನಲ್ಲಿ ಸರಾಸರಿಯಾಗಿ ಎಷ್ಟು ಮೃತ ದೇಹಗಳಿಗೆ ಶವ ಸಂಸ್ಕಾರವನ್ನು ಮಾಡಲಾಗುತ್ತಿದೆ ; ಹೂಳುವುದು ಮತ್ತು ಸುಡುವುದನ್ನು ಪ್ರತ್ಯೇಕವಾಗಿ ವಿವರ ನೀಡುವುದು ;

(ಇ) ದಿನನಿತ್ಯ ಶವಸಂಸ್ಕಾರಕ್ಕಾಗಿ ಬರುವ ಸಂಖ್ಯೆಗನುಗುಣವಾಗಿ ವಿದ್ಯುತ್ ಚಿತಾಗಾರಗಳು ಲಭ್ಯವಿದೆಯೇ ?

(ಈ) ಈ ವಿದ್ಯುತ್ ಚಿತಾಗಾರಗಳು ಆಗ್ಗಿಂದಾಗ್ಗೆ ದುರಸ್ಥಿಗೆ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಕಾರಣಗಳಿಂದ ಚಿತಾಗಾರಗಳು ಆಗ್ಗಿಂದಾಗ್ಗೆ ದುರಸ್ಥಿಗೆ ಬರುತ್ತಿದೆ; ಈ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಉ) ಬೆಂಗಳೂರಿನಲ್ಲಿರುವ ರುದ್ರಭೂಮಿ ಹಾಗೂ ವಿದ್ಯುತ್ ಚಿತಾಗಾರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಇಲ್ಲಿ ಕೆಲಸ ಮಾಡುವ ಸಿಬ್ಬಂದಿಗಳ ಆರೋಗ್ಯವನ್ನು ಗಮನದಲ್ಲಿಟ್ಟುಕೊಂಡು ಸುರಕ್ಷಿತ ಹಾಗೂ ಇನ್ನಿತರೆ ಸುರಕ್ಷಿತ ಸಾಧನಗಳನ್ನು ಒದಗಿಸಲಾಗುತ್ತಿದೆಯೇ ;

(ಊ) ಪ್ರಸ್ತುತ ಇಲ್ಲಿ ಕಾರ್ಯ ನಿರ್ವಹಿಸುತಿರುವ ಸಿಬ್ಬಂದಿಗಳಿಗೆ ಕಾಲಕಾಲಕ್ಕೆ ವೇತನವನ್ನು ನೀಡಲಾಗುತ್ತಿದೆಯೇ ;

(ಋ) ಹೊಸದಾಗಿ ಚಿತಾಗಾರಗಳನ್ನು ನಿರ್ಮಿಸಲು ಸರ್ಕಾರವು ಉದ್ದೇಶಿಸಿದೆಯೇ ; ಇದ್ದಲ್ಲಿ, ಚಿತಾಗಾರಗಳನ್ನು ಯಾವಾಗ ಮತ್ತು ಎಲ್ಲೆಲ್ಲಿ ನಿರ್ಮಿಸಲು ಸರ್ಕಾರವು ಹಮ್ಮಿಕೊಂಡಿದೆ ?

## ರಾಜ್ಯದಲ್ಲಿರುವ ವಿದ್ಯಾರ್ಥಿ ವಸತಿ ನಿಲಯಗಳ ಬಗ್ಗೆ

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೫೯೯ (೮೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಕಳೆದ ೩ ವರ್ಷಗಳಿಂದ ಈ ವಿದ್ಯಾರ್ಥಿ ನಿಲಯಗಳಿಗೆ ನೇಮಕಗೊಂಡ ಸಹಾಯಕರುಗಳ ಸಂಖ್ಯೆ ಎಷ್ಟು ;

(ಆ) ಈ ವಿದ್ಯಾರ್ಥಿ ವಸತಿ ನಿಲಯುಗಳಲ್ಲಿ ವಿದ್ಯಾರ್ಥಿಗಳಿಗೆ ಅನುಗುಣವಾಗಿ ಅಡುಗೆ ಸಹಾಯಕರುಗಳು ಹಾಗೂ ಇನ್ನಿತರ

ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆಯೇ ; ಇವರುಗಳು ಖಾಯಂ ನೌಕರರುಗಳೇ ;

(ಇ) ಖಾಯಂ ನೌಕರರುಗಳಲ್ಲದೇ ಗುತ್ತಿಗೆ ನೌಕರರುಗಳಿಂದ ಈ ವಿದ್ಯಾರ್ಥಿ ವಸತಿ ನಿಲಯಗಳನ್ನು ಸರಿಯಾದ ರೀತಿಯಲ್ಲಿ ನಡೆಸಲು ಸಾಧ್ಯವೇ ; ಖಾಯಂ ನೌಕರರುಗಳಿದ್ದರೆ, ಜವಾಬ್ದಾರಿಯುತವಾಗಿ ಕೆಲಸವನ್ನು ನಿರ್ವಹಿಸಲು ಸಾಧ್ಯವಿಲ್ಲವೇ ?

## ಸಾಮಾಜಿಕ ಭದ್ರತಾ ಯೋಜನೆ ಅಡಿ ಪಿಂಚಣಿ ಸೌಲಭ್ಯಗಳ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೦೦ (೮೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಸಹಾಯಕ, ಅಶಕ್ತ ಹಾಗೂ ದುರ್ಬಲ ವರ್ಗದವರ ರಕ್ಷಣೆಗೆ ಇರುವ ಸಾಮಾಜಿಕ ಭದ್ರತಾ ಯೋಜನೆಯಲ್ಲಿರುವ ವಿವಿಧ ಬಗೆಯ ಪಿಂಚಣಿ ಸೌಲಭ್ಯಗಳು ಯಾವುವು ;

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಿಗಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಈ ಯೋಜನೆಗಳಿಗೆ ರಾಜ್ಯದ ಹಾಗೂ ಕೇಂದ್ರ ಸರ್ಕಾರದ ಪಾಲುಗಳೆಷ್ಟು ; ಮೂರು ವರ್ಷಗಳಲ್ಲಿ ಫಲಾನುಭವಿಗಳಿಗೆ ನೀಡಿರುವ ಹಣದ ಮೊತ್ತ ಎಷ್ಟು ?

## ವಸತಿ ನಿಲಯಗಳಲ್ಲಿ ಖಾಯಂ ನೌಕರರನ್ನು ನೇಮಿಸುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೦೧ (೮೭೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಈ ವಸತಿ ನಿಲಯಗಳಿಗೆ ಸಮರ್ಥ ಮೇಲ್ವಿಚಾರಕರನ್ನು ನೇಮಿಸಲಾಗಿದೆಯೇ ; ಇವರ ಸಂಖ್ಯೆ ಎಷ್ಟು ; ಈ ಸಂಖ್ಯೆಯು ವಿದ್ಯಾರ್ಥಿಗಳಿಗೆ ಅನುಗುಣವಾಗಿದೆಯೇ ; ವಸತಿ ನಿಲಯಗಳಲ್ಲಿ ಕಂಪ್ಯೂಟರ್–ಇಂಟರ್‌ನೆಟ್ ವ್ಯವಸ್ಥೆ ಇದೆಯೇ ;

(ಆ) ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಅನುಗುಣವಾಗಿ ಸೌಲಭ್ಯಗಳು ಇದೆಯೇ ; ಯಾವ ಯಾವ ಸೌಲಭ್ಯಗಳನ್ನು ಪ್ರಸ್ತುತ ವಸತಿ ನಿಲಯಗಳಲ್ಲಿ ನೀಡಲಾಗುತ್ತಿದೆ ;

(ಇ) ವಸತಿ ನಿಲಯಗಳಲ್ಲಿ ಶುಚಿತ್ವವನ್ನು ಕಾಪಾಡಲು ಯಾವ ಯಾವ ರೀತಿಯ ಕ್ರಮ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ;

(ಈ) ಈ ವಸತಿ ನಿಲಯಗಳನ್ನು ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ಮೇಲ್ದರ್ಜೆಗೆ ಏರಿಸಲು ಸರ್ಕಾರದ ಕ್ರಮವೇನು ?

## ಲೋಕೋಪಯೋಗಿ ಇಲಾಖೆಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೨ (೬೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಲೋಕೋಪಯೋಗಿ ಇಲಾಖೆಗೆ ೨೦೧೯-೨೦ರ ಆಯವಯ್ಯದಲ್ಲಿ ಒದಗಿಸಿರುವ ಅನುದಾನವೆಷ್ಟು; (ಜಿಲ್ಲಾವಾರು ಹಂಚಿಕೆ ಮಾಡಿರುವ ಬಗ್ಗೆ ಮಾಹಿತಿ ನೀಡುವುದು)

(ಆ) ಸದರಿ ಅನುದಾನದಲ್ಲಿ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಮತ್ತು ರಸ್ತೆಗಳನ್ನು ನಿರ್ಮಿಸಲಾಗಿದೆ ; (ಕಾಮಗಾರಿಗಳ ವಿವರವನ್ನು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನೀಡಿದ್ದ ಅನುದಾನವನ್ನು ಬಳಸಿಕೊಂಡು ಕಟ್ಟಡ ಕಾಮಗಾರಿಗಳು ಇತರೆ ಕಾಮಗಾರಿಗಳು ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ ; ಪೂರ್ಣಗೊಳಿಸದಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಗೆ ವಿವಿಧ ಲೆಕ್ಕ ಶೀರ್ಷಿಕೆಯಡಿ ನೀಡಿದ್ದ ಅನುದಾನದಲ್ಲಿ ೨೦೧೯-೨೦ರ ಮಾರ್ಚ್ ಅಂತ್ಯಕ್ಕೆ ಉಳಿಕೆಯಾಗಿರುವ ಹಣವೆಷ್ಟು ? (ಪೂರ್ಣ ಮಾಹಿತಿ ಒದಗಿಸುವುದು)

## ವಸತಿ ಇಲಾಖೆಯಿಂದ ನಿವೇಶನಗಳನ್ನು ನಿರ್ಮಿಸಿರುವ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೩ (೬೧೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವಸತಿ ಇಲಾಖೆಯಿಂದ ಕಳೆದ ಎರಡು ವರ್ಷದಲ್ಲಿ ಹೊಸದಾಗಿ ಬಡಾವಣೆಗಳನ್ನು ನಿರ್ಮಾಣ ಮಾಡಲಾಗಿದೆ ;

(ಆ) ನಿರ್ಮಾಣ ಮಾಡಿರುವ ಬಡಾವಣೆಗಳಲ್ಲಿ ನಿರ್ಮಿಸಿರುವ ನಿವೇಶನಗಳ ಸಂಖ್ಯೆ ಎಷ್ಟು ; ಈ ನಿವೇಶನಗಳನ್ನು ಈಗಾಗಲೇ ಹಂಚಿಕೆ ಮಾಡಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಬೇಡಿಕೆ ಇರುವ ಜಿಲ್ಲೆಗಳಲ್ಲಿ ವಸತಿ ಬಡಾವಣೆಗಳನ್ನು ನಿರ್ಮಿಸಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಈ) ಬೆಂಗಳೂರಿನಲ್ಲಿ ಕಳೆದ ೨ ವರ್ಷದಲ್ಲಿ ನಿರ್ಮಾಣ ಮಾಡಿರುವ ಬಹು ಮಹಡಿಗಳ ವಸತಿ ಯೋಜನೆಗಳು ಯಾವುವು ;

(ಉ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಖಾಲಿ ಇರುವ ನಿವೇಶನಗಳನ್ನು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರಿಗೆ/ಸಾಮಾನ್ಯ ವರ್ಗಕ್ಕೆ ವಿವೇಚನಾ ಕೋಟಾದಡಿಯಲ್ಲಿ ಹಂಚಿಕೆ ಮಾಡಲಾಗುತ್ತಿದೆಯೇ;

(ಊ) ಹಾಗಿದ್ದಲ್ಲಿ, ಕಳೆದ ೨ ವರ್ಷದಲ್ಲಿ ಈ ಕೋಟಾದಡಿಯಲ್ಲಿ ಹಂಚಿಕೆ ಮಾಡಿರುವ ನಿವೇಶನಗಳನ್ನು ಯಾವ ಯಾವ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಗೆ ಹಂಚಿಕೆ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಭೂಪರಿವರ್ತನೆಯ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೪ (೬೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೮ರಿಂದೀಚೆಗೆ ವಾಣಿಜ್ಯ ಉದ್ದೇಶಕ್ಕೆ ಭೂಪರಿವರ್ತನೆ ಮಾಡದಂತೆ ನಿರ್ಬಂಧ ವಿಧಿಸಲಾಗಿತ್ತೇ ;

(ಆ) ಹಾಗಿದ್ದಲ್ಲಿ, ಕೊಡಗು ಜಿಲ್ಲೆಯಂತೆ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಈ ನಿರ್ಬಂಧವನ್ನು ವಿಧಿಸಲಾಗಿತ್ತು ; (ಮಾಹಿತಿ ನೀಡುವುದು)

(ಇ) ಈ ನಿರ್ಬಂಧವನ್ನು ಎಷ್ಟು ಎಕರೆ/ಸೆಂಟ್ಸ್‌ವರೆಗೆ ಭೂಪರಿವರ್ತನೆ ಮಾಡಬಾರದೆಂದು ವಿಧಿಸಲಾಗಿತ್ತು ; (ಆದೇಶದ ಪ್ರತಿಯನ್ನು ಒದಗಿಸುವುದು)

(ಈ) ವಿಧಿಸಿದ ಭೂಪರಿವರ್ತನೆಯ ನಿರ್ಬಂಧವನ್ನು ಹಿಂಪಡೆಯಲಾಗಿದೆಯೇ ; ಹಾಗಿದ್ದಲ್ಲಿ, ವಸತಿ ಮತ್ತು ಇನ್ನಿತರ ಉದ್ದೇಶಗಳಿಗೆ ಎಷ್ಟು ಎಕರೆ ಭೂಪರಿವರ್ತನೆ ಮಾಡಲು ಷರತ್ತು ವಿಧಿಸಲಾಗಿದೆ ? (ವಿವರಣೆಯೊಂದಿಗೆ ಆದೇಶದ ಪ್ರತಿಯನ್ನು ಒದಗಿಸುವುದು)

## ಕೊಳಗೇರಿ ಯುವಕ–ಯುವತಿಯರಿಗೆ ಸ್ಪರ್ಧಾತ್ಮಕ ಪರೀಕ್ಷೆ ಕುರಿತು ತರಬೇತಿ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೫ (೮೧೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಳಗೇರಿ ಯುವಕರ ಜೀವನ ರೂಪಿಸುವ ನಿಟ್ಟಿನಲ್ಲಿ ಅಲ್ಲಿನ ಯುವಕ–ಯುವತಿಯರಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ತರಬೇತಿ ಶಿಕ್ಷಣ ಕೊಡುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಕೊಳಗೇರಿ ಯುವಕ–ಯುವತಿಯರಿಗೆ ಉನ್ನತ ವ್ಯಾಸಂಗ ಮಾಡಲು ವಿಶೇಷ ತರಬೇತಿಯನ್ನು ನೀಡುವ ಯಾವ ಯಾವ ಯೋಜನೆಗಳಿವೆ ; (ವಿವರ ಒದಗಿಸುವುದು)

(ಇ) ಕೊಳಗೇರಿ ಅಭಿವೃದ್ಧಿ ಸಂಸ್ಥೆಯ ಮುಖಾಂತರ ಯುವಕ–ಯುವತಿಯರಿಗೆ ಕೆ.ಎ.ಎಸ್. ಮತ್ತು ಐ.ಎ.ಎಸ್. ಉದ್ಯೋಗ ಪಡೆಯುವ ನಿಟ್ಟಿನಲ್ಲಿ ತರಬೇತಿ ನೀಡಲಾಗುತ್ತಿದೆಯೇ ;

(ಈ) ನೀಡುತ್ತಿದ್ದಲ್ಲಿ, ತರಬೇತಿ ಆಯ್ಕೆಗೆ ಯಾವ ಮಾನದಂಡವನ್ನು ರೂಪಿಸಲಾಗಿದೆ ; ಹಾಗೂ ಯಾವ ಸಂಸ್ಥೆಗೆ ನೀಡಲಾಗಿದೆ ;

(ಉ) ತರಬೇತಿ ಪಡೆಯಲು ನಿಗಧಿಪಡಿಸಿರುವ ಅನುದಾನವೆಷ್ಟು ; ಈವರೆಗೆ ತರಬೇತಿ ಪಡೆದ ಫಲಾನುಭವಿಗಳು ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಬಳ್ಳಾರಿ–ಬಾದನಹಳ್ಳಿ ರಸ್ತೆ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೬೦೬ (೬೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೧೯–೨೦೨೦ ನೇ ಸಾಲಿನ SHDP ಅಡಿಯಲ್ಲಿ ಬಳ್ಳಾರಿ ಜಿಲ್ಲೆ, ಕಂಪ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬಳ್ಳಾರಿ ತಾಲ್ಲೂಕಿನ ಮಾರುತಿ ಕ್ಯಾಂಪ್–ಸಿದ್ಧಮ್ಮನಹಳ್ಳಿ–ಯತ್ರಂಗಳ–ಸೋಮಸಮುದ್ರ ಜಿಲ್ಲಾ ಮುಖ್ಯ ರಸ್ತೆ (ರಾಜ್ಯ ಹೆದ್ದಾರಿ–೧೩೨ರ ಸಿದ್ಧಮ್ಮನಹಳ್ಳಿ ಹತ್ತಿರ ಸೇರುವ ರಸ್ತೆ) ಕಿ.ಮೀ. ೨.೫೦ ರಿಂದ ೨೦.೦೦ ರವರೆಗೆ ಹಾಗೂ ಬಳ್ಳಾರಿ–ಬಾದನಹಟ್ಟಿ ಜಿಲ್ಲಾ ಮುಖ್ಯ ರಸ್ತೆ ಯರ್ರಂಗಳಿಯಿಂದ ರಾಷ್ಟ್ರೀಯ ಹೆದ್ದಾರಿ ೧೫೦ಎ (ಸೋಮಸಮುದ್ರ) ಹತ್ತಿರ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಅನುಮೋದನೆ ನೀಡಲಾಗಿದೆಯೇ ?

## ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-**

೬೦೭ (೬೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಮೂಲಭೂತ ಸೌಲಭ್ಯಗಳ ಕೊರತೆ ಇರುವ ವಸತಿ ಶಾಲೆಗಳ ಮಾಹಿತಿಯನ್ನು ಜಿಲ್ಲಾವಾರು ನೀಡುವುದು ;

(ಇ) ಬಾಡಿಗೆ ಕಟ್ಟಡದಲ್ಲಿ ಹಾಗೂ ಸ್ವಂತ ಕಟ್ಟಡದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ವಿವರಗಳನ್ನು ಜಿಲ್ಲಾವಾರು ಒದಗಿಸುವುದು ;

(ಈ) ಲೇಖನ ಸಾಮಗ್ರಿಗಳು, ಆಹಾರ ಪದಾರ್ಥಗಳು, ತಟ್ಟೆ, ಲೋಟದ ವ್ಯವಸ್ಥೆಗಳನ್ನು ಸಕಾಲದಲ್ಲಿ ಕಲ್ಪಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿ ಸೌಲಭ್ಯಗಳನ್ನು ಸಕಾಲದಲ್ಲಿ ಕಲ್ಪಿಸದೆ ಇರಲು ಕಾರಣಗಳೇನು;

(ಊ) ಸಕಾಲದಲ್ಲಿ ಸದರಿ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ?

## ತಹಶೀಲ್ದಾರ ಮತ್ತು ಉಪ ತಹಶೀಲ್ದಾರರ ಹುದ್ದೆ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :–**

೬೦೮ (೬೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ತಹಶೀಲ್ದಾರ ಹಾಗೂ ಉಪ ತಹಶೀಲ್ದಾರರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಈ) ತಹಶೀಲ್ದಾರ್ ಕಛೇರಿಗಳಲ್ಲಿ ಆರ್.ಆರ್.ಟಿ. ವಿಭಾಗದಲ್ಲಿ ತಕರಾರುಗಳ ವಿಲೇವಾರಿ ವಿಳಂಬ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಾದಲ್ಲಿ, ಸುಧಾರಣೆಗೆ ಯಾವ ಕ್ರಮ ರೂಪಿಸಲಾಗಿದೆ ? (ವಿವರ ನೀಡುವುದು)

## ಕೃಷಿ ಹೊಂಡ ಯೋಜನೆಯಲ್ಲಿನ ಅವ್ಯವಹಾರಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :–**

೬೦೯ (೬೪೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಹೊಂಡ ಯೋಜನೆಯಲ್ಲಿ ಅವ್ಯವಹಾರ ನಡೆದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಅವ್ಯವಹಾರದ ಸಂಬಂಧ ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ಹಾಗೂ ಗುತ್ತಿಗೆದಾರರ ಸಂಖ್ಯೆ ಎಷ್ಟು ; (ವರ್ಗವಾರು ವಿವರ ನೀಡುವುದು)

(ಈ) ಸದರಿ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ಹಾಗೂ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ತಿರುಮಲ–ತಿರುಪತಿಯಲ್ಲಿನ ಕರ್ನಾಟಕ ಛತ್ರದ ಮೂಲಭೂತ ಸೌಲಭ್ಯಗಳ ಕೊರತೆ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೧೦ (೭೯೮) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಜರಾಯಿ ಇಲಾಖಾ ವ್ಯಾಪ್ತಿಯಲ್ಲಿನ ತಿರುಪತಿ–ತಿರುಮಲ ಕರ್ನಾಟಕ ವಸತಿ ಗೃಹದ ನಿರ್ವಹಣೆಯನ್ನು ಯಾವ ಇಲಾಖೆಗೆ ವಹಿಸಲಾಗಿದೆ ;

(ಆ) ಸದರಿ ವಸತಿ ಗೃಹದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕರ್ನಾಟಕದ ಭಕ್ತಾಧಿಗಳಿಗೆ ಪಾರದರ್ಶಕವಾಗಿ ಸದರಿ ವಸತಿ ಗೃಹದಲ್ಲಿ ಕೊಠಡಿಗಳು ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ಗೃಹ ನಿರ್ಮಾಣ ಮಂಡಳಿಯ ಯೋಜನೆಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೧೧ (೭೯೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ನಿರ್ಮಾಣ ಮಂಡಳಿಯ ಯೋಜನೆಗಳಾವುವು ;

(ಆ) ಸದರಿ ಮಂಡಳಿಯ ಮಾರ್ಗಸೂಚಿಗಳೇನು ; (ವಿವರ ನೀಡುವುದು)

(ಇ) ಸದರಿ ಯೋಜನೆಗಳ ಅಡಿಯಲ್ಲಿ ಇದುವರೆವಿಗೂ ರಾಜ್ಯದಲ್ಲಿ ಹಂಚಿಕೆ ಮಾಡಿರುವ ನಿವೇಶನ ಮತ್ತು ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಹಂಚಿಕೆ ಮಾಡುವಲ್ಲಿನ ಮಾನದಂಡಗಳೇನು ; (ವಿವರ ನೀಡುವುದು)

(ಉ) ಹಂಚಿಕೆಯಾಗದೆ ಖಾಲಿ ಇರುವ ನಿವೇಶನ ಹಾಗೂ ಮನೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕಿನ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೨ (೬೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ;

(ಆ) ಒಟ್ಟು ಎಷ್ಟು ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ ಮಾಡಲಾಗಿದೆ ;

(ಇ) ಘೋಷಣೆಯಾದ ಕಂದಾಯ ಗ್ರಾಮಗಳನ್ನು ಭೂಮಿ ಉಸ್ತುವಾರಿ ಕೋಶಗಳಲ್ಲಿ ಅಳವಡಿಸಲಾಗಿದೆಯೇ ;

(ಈ) ಅಳವಡಿಸದೇ ಇದ್ದಲ್ಲಿ, ಭೂಮಿ ಉಸ್ತುವಾರಿ ಕೋಶಗಳಲ್ಲಿ ಅಳವಡಿಸಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶವೆಷ್ಟು ?

## ಅತಿವೃಷ್ಠಿಯಿಂದ ಹಾವೇರಿ, ಗದಗ, ಧಾರವಾಡ ಜಿಲ್ಲೆಗಳಲ್ಲಿ ಹಾನಿಗೊಳಗಾದ ಮನೆಗಳ ಪರಿಹಾರದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೩ (೬೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಉಂಟಾದ ಅತಿವೃಷ್ಠಿಯಿಂದ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲಾದ್ಯಂತ ಹಾನಿಗೊಳಗಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಹಾನಿಗೊಳಗಾದ ಮನೆಗಳ ಪೈಕಿ ಒಟ್ಟು ಎಷ್ಟು ಮನೆಗಳಿಗೆ ಪರಿಹಾರವನ್ನು ಒದಗಿಸಲಾಗಿದೆ ;

(ಇ) ಪರಿಹಾರ ದೊರಕದೇ ಇರುವ ಅರ್ಹ ಫಲಾನುಭವಿಗಳಿಗೆ ಪರಿಹಾರ ಒದಗಿಸಲು ಸರ್ಕಾರಕ್ಕೆ ಬೇಕಾಗುವ ಕಾಲಮಿತಿ ಎಷ್ಟು ;

(ಈ) ಪರಿಹಾರ ನೀಡಿದ ಫಲಾನುಭವಿಗಳ ತಾಲ್ಲೂಕುವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ?

## ಕ್ರೈಸ್ (KREIS) ಅಧೀನದಲ್ಲಿ ನಡೆಯುತ್ತಿರುವ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ವಸತಿ ಶಾಲೆಗಳ ಕುರಿತು

**ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೧೪ (೮೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕ್ರೈಸ್) ವತಿಯಿಂದ ನಡೆಯುತ್ತಿರುವ ವಸತಿ ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕುಮಾರನಾಯಕ ವರದಿಯಂತೆ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು ;

(ಇ) ಕ್ರೈಸ್ ಅಧೀನದಲ್ಲಿ ನಡೆಯುತ್ತಿದ್ದ ಅಲ್ಪಸಂಖ್ಯಾತ ವಸತಿ ಶಾಲೆಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿದಂತೆ ಪರಿಶಿಷ್ಠ ಪಂಗಡಗಳ ಮೊರಾರ್ಜಿ ದೇಸಾಯಿ/ ರಾಣಿಚನ್ನಮ್ಮ ವಸತಿ ಶಾಲೆಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ವಿಲೀನಗೊಳಿಸಿ, ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಈ) ಸದರಿ ಶಾಲೆಗಳನ್ನು ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿ, ಇತರೇ ಇಲಾಖೆಯ ಸರ್ಕಾರಿ ನೌಕರರಿಗೆ ಮತ್ತು ಶಿಕ್ಷಕರಿಗೆ ಇರುವ ಸೌಲಭ್ಯಗಳನ್ನು ಸದರಿ ನೌಕರರುಗಳಿಗೆ ಕಲ್ಪಿಸಲು ಇನ್ನಾದರೂ ಸರ್ಕಾರ ಮುಂದಾಗುವುದೇ ; ಯಾವ ಕಾಲಮಿತಿಯಲ್ಲಿ ಸದರಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ?

## ಬೆಳಗಾವಿ ವಿಭಾಗದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಬಗ್ಗೆ

**ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೧೫ (೮೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೆಳಗಾವಿ ವಿಭಾಗದಲ್ಲಿ ಒಟ್ಟು ಎಷ್ಟು ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ ; (ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ಹಾಗೂ ಪದವಿ) ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿರುತ್ತವೆ ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು ;

(ಇ) ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಇನ್ನಾದರೂ ಸರ್ಕಾರ ಸ್ವಂತ ಕಟ್ಟಡ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಬಾಕಿ ಇರುವ ಪೋಡಿ ಪ್ರಕರಣಗಳ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೬ (೮೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಬಾಕಿ ಇರುವ ಪೋಡಿ ಪ್ರಕರಣಗಳು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಪೋಡಿ ಆಗದಿರುವುದರಿಂದ ರೈತರು ಸಂಕಷ್ಟದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪೋಡಿ ಪ್ರಕರಣಗಳು ಬಾಕಿ ಇರುವುದರಿಂದ ರೈತರು ಯಾವ ಯಾವ ಸವಲತ್ತುಗಳಿಂದ ವಂಚಿತರಾಗಿದ್ದಾರೆ ;

(ಈ) ಪೋಡಿ ಮುಕ್ತ ತಾಲ್ಲೂಕು ಯೋಜನೆ ಸರ್ಕಾರದ ಅಸ್ತಿತ್ವದಲ್ಲಿ ಇದೆಯೇ ;

(ಉ) ಇದ್ದರೆ, ವಿವರಗಳನ್ನು ನೀಡುವುದು?

## ಸ್ಮಶಾನ ಜಾಗದ ಕುರಿತು

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೭ (೮೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸ್ಮಶಾನಕ್ಕೆ ಜಮೀನು ಇಲ್ಲದೇ ಇರುವ ಗ್ರಾಮಗಳೆಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಈ ಸಮಸ್ಯೆ ಜಟಿಲವಾದ್ದರಿಂದ ಪ್ರತಿ ಗ್ರಾಮದಲ್ಲಿಯೂ ವಿವಿಧ ಸಮುದಾಯಗಳಿಗೆ ಸ್ಮಶಾನಗಳಿಗಾಗಿ ಸರ್ಕಾರ ಸರ್ಕಾರಿ ಜಮೀನನ್ನು ಮೀಸಲಿಟ್ಟಿದೆಯೇ ;

(ಇ) ಇಲ್ಲದಿದ್ದಲ್ಲಿ, ಈ ಸಮಸ್ಯೆಗೆ ಪರ್ಯಾಯ ವ್ಯವಸ್ಥೆಯನ್ನು ರೂಪಿಸಿದೆಯೇ ?

## ಜಲಸಾರಿಗೆಯ ನಿರ್ದಿಷ್ಟ ಮಾರ್ಗಗಳ ಕುರಿತು

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೮ (೮೩೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಳನಾಡು ಜಲಸಾರಿಗೆಯ ನಿರ್ದಿಷ್ಟ ಮಾರ್ಗಗಳು ಯಾವುವು ; ವಿವರಗಳನ್ನು ನೀಡುವುದು ; ಈ ಯೋಜನೆಗಳಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನ ಎಷ್ಟು ;

(ಆ) ಕಳೆದ ೫ ವರ್ಷಗಳಿಂದ ಈ ಒಳನಾಡು ಜಲಸಾರಿಗೆ ಮುಖಾಂತರ ಪ್ರಯಾಣಿಸಿದ ಪ್ರಯಾಣಿಕರ ಸಂಖ್ಯೆ ಎಷ್ಟು ; ಹಾಗೂ ಈ ಮಾರ್ಗಗಳಲ್ಲಿ ಸಾಗಾಣಿಕೆಯಾದ ಸರಕುಗಳ ಪ್ರಮಾಣ ಎಷ್ಟು ?

## ನೆರೆ ಪರಿಹಾರ ಕುರಿತು

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೯ (೮೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜುಲೈ–೧೯ರ ಮಾಹೆಯಿಂದ ಅಕ್ಟೋಬರ್–೧೯ರ ಮಾಹೆಯವರೆಗೆ ನೆರೆ, ಮಳೆಗೆ ಒಳಗಾದ ಜಿಲ್ಲೆಗಳು ಯಾವುವು ;

(ಆ) ಈ ಪ್ರವಾಹದಿಂದ ಹಾನಿಗೊಳಗಾದವರ ಸಂಖ್ಯೆ ಎಷ್ಟು ; ಮನೆ ಕಳೆದುಕೊಂಡಿರುವವರ ಸಂಖ್ಯೆ ಎಷ್ಟು ;

(ಇ) ನೆರೆ ಸಂತ್ರಸ್ತರಿಗೆ ಸರ್ಕಾರವು ನೀಡಿರುವ ಸವಲತ್ತುಗಳು ಯಾವುವು ; ಇದಕ್ಕಾಗಿ ವೆಚ್ಚ ಮಾಡಲಾದ ಅನುದಾನವೆಷ್ಟು ?

## ಪಹಣಿ (RTC) ೧೧ E ಸ್ಕೆಚ್‌ಗಳ ಕುರಿತು

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೨೦ (೮೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಹಶೀಲ್ದಾರ್ ಕಛೇರಿಗಳಲ್ಲಿ ರೈತರಿಗೆ ಅಗತ್ಯವಾಗಿ ಬೇಕಾಗಿರುವ ಪಹಣಿ (ಆರ್.ಟಿ.ಸಿ) ೧೧ಇ ಸ್ಕೆಚ್, ಇಂತಹ ಸವಲತ್ತುಗಳ ನೀಡುವಿಕೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ನಿವಾರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಡಾ: ನಂಜುಂಡಪ್ಪ ವರದಿ ಪ್ರಕಾರ ಹಿಂದುಳಿದ ತಾಲ್ಲೂಕುಗಳ ವಿವರದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೨೧ (೮೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ: ನಂಜುಂಡಪ್ಪ ವರದಿ ಪ್ರಕಾರ ಹಿಂದುಳಿದ, ಅತಿ ಹಿಂದುಳಿದ ಹಾಗೂ ಅತ್ಯಂತ ಹಿಂದುಳಿದ ತಾಲ್ಲೂಕುಗಳು ಯಾವುವು ; (ವಿವರ ಒದಗಿಸುವುದು)

(ಆ) ಹಿಂದುಳಿದ, ಅತಿ ಹಿಂದುಳಿದ ಹಾಗೂ ಅತ್ಯಂತ ಹಿಂದುಳಿದ ತಾಲ್ಲೂಕುಗಳಿಗೆ ವಿವಿಧ ಇಲಾಖೆಗಳಿಂದ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

## ಎಸ್.ಸಿ.ಪಿ ಮತ್ತು ಟಿ.ಎಸ್.ಪಿ (SCP/TSP) ಕಾಮಗಾರಿಗಳ ಮಾಹಿತಿ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೨ (೬೦೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೨೦೧೯–೨೦ನೇ ಸಾಲಿನಲ್ಲಿ ಧಾರವಾಡ, ಹಾವೇರಿ ಹಾಗೂ ಗದಗ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಕೈಗೊಂಡ SCP/TSP ಕಾಮಗಾರಿಗಳೆಷ್ಟು ; (ಮಾಹಿತಿ ನೀಡುವುದು)

(ಆ) ೨೦೧೮–೨೦೧೯–೨೦ನೇ ಸಾಲಿನಲ್ಲಿ SCP/TSP ಕಾಮಗಾರಿಗಳಿಗೆ ಅತಿ ಹೆಚ್ಚು ಅನುದಾನ ಬಿಡುಗಡೆ ಮಾಡಿರುವಂತಹ ಜಿಲ್ಲೆಗಳು ಯಾವುವು ? (ಅಂಕಿ ಅಂಶಗಳನ್ನು ನೀಡುವುದು)

## ಎಸ್.ಸಿ.ಪಿ ಮತ್ತು ಟಿ.ಎಸ್.ಪಿ SCP/TSP ಯೋಜನೆಯಡಿ ಮನೆಗಳ ನಿರ್ಮಾಣದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೩ (೬೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೨೦೧೯–೨೦ನೇ ಸಾಲಿನಲ್ಲಿ ಕಳೆದ ವರ್ಷಗಳಲ್ಲಿ ಧಾರವಾಡ, ಹಾವೇರಿ ಹಾಗೂ ಗದಗ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ SCP/TSP ಯೋಜನೆಯಡಿಯಲ್ಲಿ ಮನೆಗಳನ್ನು ನಿರ್ಮಿಸಲು ಮೀಸಲಿರಿಸಿದ ಅನುದಾನವೆಷ್ಟು ;

(ಆ) ಮೀಸಲಿರಿಸಿದ ಅನುದಾನದಲ್ಲಿ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಇ) ೨೦೧೮ ರಿಂದ ೨೦೨೦ನೇ ಸಾಲಿನಲ್ಲಿ ಸರ್ಕಾರ ಖರ್ಚು ಮಾಡಿದ ಅನುದಾನವೆಷ್ಟು ;

(ಈ) ೨೦೧೮ ರಿಂದ ೨೦೨೦ ನೇ ಸಾಲಿನಲ್ಲಿ SCP/TSP ಯೋಜನೆಯಡಿ ಮನೆ ನಿರ್ಮಿಸಿಕೊಂಡ ಫಲಾನುಭವಿಗಳೆಷ್ಟು ? (ಮಾಹಿತಿ ನೀಡುವುದು)

## ರುದ್ರಭೂಮಿ ಹೊಂದದೆ ಇರುವ ಹಳ್ಳಿಗಳ ಬಗ್ಗೆ ಮಾಹಿತಿ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೪ (೬೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಜಿಲ್ಲೆಯಲ್ಲಿ ರುದ್ರಭೂಮಿ ಹೊಂದದೆ ಇರುವ ಗ್ರಾಮಗಳೆಷ್ಟು ;

(ಆ) ರುದ್ರಭೂಮಿ ಹೊಂದದೆ ಇರುವ ಗ್ರಾಮಗಳಿಗೆ ರುದ್ರಭೂಮಿ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ದಲಿತರು ರುದ್ರಭೂಮಿ ಹೊಂದದೆ ಇರುವ ಗ್ರಾಮಗಳೆಷ್ಟು ? (ಹೆಸರುಗಳನ್ನು ತಿಳಿಸುವುದು)

## ಕಂದಾಯ ಇಲಾಖೆಯ ಗ್ರಾಮ ಸಹಾಯಕರಿಗೆ ಸೇವಾ ಭದ್ರತೆಯಡಿಯಲ್ಲಿ ಖಾಯಂ ಮಾಡುವ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೫ (೮೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯು ಗ್ರಾಮ ಸಹಾಯಕರಿಗೆ ಸೇವಾ ಭದ್ರತೆಯಡಿಯಲ್ಲಿ ಖಾಯಂ “ಡಿ” ದರ್ಜೆ ನೌಕರರೆಂದು ಪರಿಗಣಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಗ್ರಾಮ ಸಹಾಯಕರನ್ನು ಖಾಯಂ “ಡಿ” ದರ್ಜೆ ನೌಕರರೆಂದು ಯಾವಾಗ ಆದೇಶ ಹೊರಡಿಸಲಾಗುವುದು ; ಈ ರೀತಿ ರಾಜ್ಯದಲ್ಲಿ ಎಷ್ಟು ಜನ ಗ್ರಾಮ ಸಹಾಯಕರು ಕೆಲಸ ನಿರ್ವಹಿಸುತ್ತಿದ್ದಾರೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಭೂ ಲಭ್ಯತಾ ಪಟ್ಟಿಯನ್ನು ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಪ್ರಕಟಿಸುವ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೬ (೮೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಭೂ ಮಂಜೂರಾತಿ ನಿಯಮಗಳು ೧೯೬೯ರ ನಿಯಮ ೫ರ ಅನ್ವಯ ಗ್ರಾಮಗಳಲ್ಲಿರುವ ಸರ್ಕಾರಿ ಜಮೀನುಗಳ “ಭೂ ಲಭ್ಯತಾ ಪಟ್ಟಿ”ಗಳನ್ನು ಗ್ರಾಮ ಪಂಚಾಯಿತಿ ಕಾರ್ಯಾಲಯದ ಫಲಕದಲ್ಲಿ ಪ್ರಕಟಿಸಲಾಗಿದೆಯೇ ; (ವಿವರ ನೀಡುವುದು)

(ಆ) ಈ ಬಗ್ಗೆ ಸರ್ಕಾರ ಆದೇಶ ಹೊರಡಿಸಿದ್ದರೂ ಸಹ ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಕೈಗೊಂಡಿರುವ ಕ್ರಮಗಳ ಮಾಹಿತಿ ಒದಗಿಸುವುದು ?

## ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ರೈತರು ಸಲ್ಲಿಸಿರುವ ಅರ್ಜಿ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೭ (೮೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ರೈತರು ನಮೂನೆ ೫೭ರಲ್ಲಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಹೀಗೆ ಸ್ವೀಕರಿಸಿದ ಅರ್ಜಿಗಳನ್ನು ಡಿಜಿಟಲೀಕರಣಗೊಳಿಸಲಾಗಿದೆಯೇ; ಆಗದಿದ್ದಲ್ಲಿ, ಡಿಜಿಟಲೀಕರಣ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳ ಪೂರ್ಣ ಮಾಹಿತಿ ಒದಗಿಸುವುದು ?

## ರಾಜ್ಯದಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾಗಿದ್ದು, ಪರಿಹಾರದ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೮ (೭೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾದ ಜಿಲ್ಲೆಗಳಾವುವು ; ಪ್ರವಾಹ ಪೀಡಿತ ಜನರಿಗೆ ಸೂಕ್ತ ಪರಿಹಾರ ಒದಗಿಸಲು ಕ್ರಮಕೈಗೊಳ್ಳಲಾಗಿದೆಯೇ ;

(ಆ) ರಾಜ್ಯದ ಪ್ರವಾಹ ಪೀಡಿತ ಪ್ರದೇಶಗಳಿಗೆ ಕೇಂದ್ರದ ಪರಿಹಾರ ನಿಧಿಯಿಂದ ಬಂದ ಹಣವೆಷ್ಟು ; ಇದನ್ನು ಪೂರ್ಣವಾಗಿ ಬಳಕೆ ಮಾಡಿಕೊಳ್ಳಲಾಗಿದೆಯೇ ;

(ಇ) ರಾಜ್ಯ ಸರ್ಕಾರದಿಂದ ಪ್ರವಾಹ ಪೀಡಿತ ಪ್ರದೇಶಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಪ್ರವಾಹ ಪೀಡಿತ ಜನರಿಗೆ ಪುನರ್ವಸತಿ ಕಲ್ಪಿಸಲಾಗಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಉ) ಪ್ರವಾಹದಿಂದ ಇದುವರೆಗೆ ಎಷ್ಟು ಜನ ಮರಣ ಹೊಂದಿರುತ್ತಾರೆ? (ಪೂರ್ಣ ವಿವರಗಳನ್ನು ನೀಡುವುದು)

## ಬೆಂಗಳೂರು ಮಾಗಡಿ ಚತುಷ್ಪಥ ರಸ್ತೆ ಕಾಮಗಾರಿಯು ಕೇಶಿಫ್‌ನಲ್ಲಿ ಮಂಜೂರಾಗಿದ್ದು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೯ (೮೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ಮಾಗಡಿ ಚತುಷ್ಪಥ ರಸ್ತೆ ಕಾಮಗಾರಿಯು ಕೇಶಿಫ್‌ನಲ್ಲಿ ಮಂಜೂರಾಗಿದ್ದು, ಇಲ್ಲಿಯವರೆಗೆ ಕಾಮಗಾರಿ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾಮಗಾರಿಯು ಪೂರ್ಣಗೊಳ್ಳಲು ಎಷ್ಟು ಕಾಲಾವಕಾಶ ಬೇಕಾಗಿರುತ್ತದೆ ; ಈ ಯೋಜನೆಗೆ ತಗಲುವ ಅಂದಾಜು ಮೊತ್ತವೆಷ್ಟು ;

(ಇ) ಈ ಕಾಮಗಾರಿಯು ವಿಳಂಬವಾಗುವುದಕ್ಕೆ ಕಾರಣವೇನು ? (ಪೂರ್ಣ ವಿವರ ನೀಡುವುದು)

## ವಸತಿ ಇಲಾಖೆಯ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೦ (೮೬೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಸತಿ ಯೋಜನೆಗಳು ಯಾವುವು ; (ಸಂಪೂರ್ಣ ವಿವರ ಒದಗಿಸುವುದು)

(ಆ) ಸದರಿ ಯೋಜನೆಗಳಿಂದ ಉಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಫಲಾನುಭವಿಗಳವಾರು ಯೋಜನೆವಾರು ಕಳೆದ ೩ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ವಸತಿ ರಹಿತ ನಿವೇಶನರಹಿತ ಹಾಗೂ ಗುಡಿಸಲು ವಾಸಿಗಳ ಸಂಖ್ಯೆ ಎಷ್ಟು ; (ವಿಧಾನಸಭಾವಾರು ಸ್ಪಷ್ಟ ಮಾಹಿತಿ ಒದಗಿಸುವುದು)

(ಈ) ಈ ಗುಡಿಸಲು ಮುಕ್ತ ಜಿಲ್ಲೆಯಾಗಿ ಮಾಡಲು ಹಾಗೂ ನಿವೇಶನರಹಿತರಿಗೆ ನಿವೇಶನ ಹಂಚಿಕೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಬೀದರ್ ಜಿಲ್ಲೆಯಲ್ಲಿ ಮೇಲ್ಕಾಣಿಸಿದ ಯೋಜನೆಗಳು ಸೇರಿದಂತೆ ಬಸವಶ್ರೀ ಅಂಬೇಡ್ಕರ್ ವಸತಿ ಯೋಜನೆಗಳಿಗೆ ಫಲಾನುಭವಿಗಳನ್ನು ಗುರುತಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ ? (ಪ್ರಗತಿಯ ಸಂಪೂರ್ಣ ವಿವರ ನೀಡುವುದು)

## ೨೦೧೮-೧೯, ೨೦೧೯-೨೦೨೦ನೇ ಸಾಲಿನಲ್ಲಿ ಕೃಷಿ ಹೊಂಡಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೧ (೮೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೮-೧೯ ಮತ್ತು ೨೦೧೯-೨೦೨೦ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದಕ್ಕೆ ಮೀಸಲಿಟ್ಟಿರುವ ಅನುದಾನ ಎಷ್ಟು ; ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಇ) ಇದುವರೆಗೆ ಎಷ್ಟು ಫಲಾನುಭವಿಗಳು ಇದರ ಪ್ರಯೋಜನ ಪಡೆದಿರುತ್ತಾರೆ ; (ಮಾಹಿತಿ ನೀಡುವುದು)

(ಈ) ಫಲಾನುಭವಿಗಳಿಗೆ ದೊರೆತಿರುವ ಸಬ್ಸಿಡಿ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಬೀದರ್ ಜಿಲ್ಲೆಯ ತಹಶೀಲ್ದಾರ ಕಛೇರಿಗಳಲ್ಲಿ ಪತ್ರಗಳಿಗೆ ಆಗುತ್ತಿರುವ ವಿಳಂಬದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೨ (೮೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರರ/ನಾಡ ಕಛೇರಿಗಳಲ್ಲಿ ಸಾರ್ವಜನಿಕರಿಗೂ ಮತ್ತು ರೈತರಿಗೂ ತಮ್ಮ ಜಮೀನಿನ ಪಹಣಿ ಮತ್ತು ಇತರೆ ಪತ್ರಿಕೆ ಪಡೆದುಕೊಳ್ಳಲು

ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಬಂದಿದ್ದರೆ, ಸರ್ಕಾರವು ಕೂಡಲೇ ಇದರ ನಿವಾರಣೆಗೆ ಯಾವ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ಒದಗಿಸುವುದು)

(ಇ) ಅರ್ಜಿ ಸಲ್ಲಿಸಿದ ಕೂಡಲೇ ತ್ವರಿತವಾಗಿ ಜಮೀನಿನ ದಾಖಲಾತಿಗಳನ್ನು ನೀಡಲು ತಹಶೀಲ್ದಾರ ಕಛೇರಿಯಲ್ಲಿ ರೈತರಿಗೂ/ ಸಾರ್ವಜನಿಕರಿಗೂ ತುಂಬಾ ತೊಂದರೆ ಅನುಭವಿಸುತ್ತಿರುವುದರಿಂದ ಕೂಡಲೇ ಬೇಜವಾಬ್ದಾರಿ ಅಧಿಕಾರಿ/ಸಿಬ್ಬಂದಿಗಳ ವರ್ತನೆ ವಿರುದ್ಧ ಯಾವ ಕ್ರಮ ಜರುಗಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಜಾತಿ ಪ್ರಮಾಣ ಪತ್ರ ಹಾಗೂ ಆದಾಯ , ಇತರೆ ಪ್ರವಾಣ ಪತ್ರ ಪಡೆದುಕೊಳ್ಳಲು ಆಗುತ್ತಿರುವ ತೊಂದರೆಗಳೇನು ; ಮತ್ತು ತೊಂದರೆ ಆಗದಂತೆ ಸರ್ಕಾರವು ಯಾವ ಯಾವ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಸಾಲ ಸೌಲಭ್ಯ ಕಲ್ಪಿಸಿಕೊಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೩ (೮೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ: ಬಿ.ಆರ್. ಅಂಬೇಡ್ಕರ್ ಹಾಗೂ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ವತಿಯಿಂದ ಕಳೆದ ೫ ವರ್ಷಗಳಲ್ಲಿ ಏತ ನೀರಾವರಿ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯ

ಕಲ್ಪಿಸಿಕೊಡಲಾಗಿದೆ ; (ಕಲ್ಪಿಸಿದ್ದಲ್ಲಿ ವರ್ಷವಾರು, ವಿಧಾನಸಭಾ ಕ್ಷೇತ್ರವಾರು ಫಲಾನುಭವಿಗಳವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಮಹತ್ವಾಕಾಂಕ್ಷೆ ಯೋಜನೆಯಡಿಯಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಿದ್ದಲ್ಲಿ ಯಾವ ಯಾವ ಕಂಪನಿ/ಗುತ್ತಿಗೆದಾರರಿಗೆ ಕಾರ್ಯಾದೇಶವನ್ನು ನೀಡಲಾಗಿದೆ ; ನೀಡಿದ್ದಲ್ಲಿ, ಆಯಾ ಕಂಪನಿ/ಗುತ್ತಿಗೆದಾರರ ವತಿಯಿಂದ ಕೆಲಸ ಪೂರ್ಣಗೊಂಡಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಪೂರ್ಣಗೊಂಡಿದ್ದಲ್ಲಿ ಕಂಪನಿ/ಗುತ್ತಿಗೆದಾರರಿಗೆ ಎಷ್ಟು ಮೊತ್ತವನ್ನು ನೀಡಲಾಗಿದೆ ಹಾಗೂ ಬಾಕಿಯಿರುವ ಮೊತ್ತವೆಷ್ಟು; ಫಲಾನುಭವಿಗಳವಾರು ಹೆಸರು, ವಿಳಾಸ, ಕೆಲಸ ನಿರ್ವಹಿಸಲಾಗಿದೆಯೇ ; ನಿರ್ವಹಿಸಿದ್ದಲ್ಲಿ, ಎಷ್ಟು ಕಿ.ಮೀ ನಿರ್ವಹಿಸಲಾಗಿದೆ ? (ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರವಾರು ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ಕಂದಾಯ ಜಾಗದ ನಿವೇಶನಗಳ ನೋಂದಣಿಯನ್ನು ನಿಲ್ಲಿಸಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೪ (೮೧೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಏಕಾಏಕಿ ಕಂದಾಯ ಜಾಗದ ನಿವೇಶನಗಳ ನೋಂದಣಿಯನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದರಿಂದ ಸಾಮಾನ್ಯ ಬಡಕುಟುಂಬದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾಮಾನ್ಯ ಬಡಕುಟುಂಬದ ಜನರು ಒಪ್ಪಂದ ಕರಾರು ಮಾಡಿಕೊಂಡಿದ್ದು, ಇವರಿಗೆ ನೋಂದಣಿಯು ಇಲ್ಲದೇ ಮತ್ತು ಮಾಲೀಕರಿಂದ ಒಪ್ಪಂದ ಕರಾರು ಮಾಡಿಕೊಂಡಿರುವ ಹಣವು ಇಲ್ಲದೆ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕೆಲವು ದಿನಗಳ ಗಡವುಗಳನ್ನು ನೋಂದಣಿ ಮಾಡಿಸಿಕೊಳ್ಳುವಂತೆ ಸರ್ಕಾರವು ಕ್ರಮಗಳೇನಾದರೂ ಕೈಗೊಂಡಿದೆಯೇ ; ಅದರಂತೆ, ನಿವೇಶನ ಒಪ್ಪಂದ ಕರಾರು ಹಣವನ್ನು ಒಪ್ಪಂದ ಮಾಡಿಕೊಂಡ ಜನ ಸಾಮಾನ್ಯರಿಗೆ ದೊರಕಿಸಿಕೊಡುವಂತೆ ಸರ್ಕಾರವು ಮಾಲೀಕರಿಗೆ ಸೂಚನೆ ನೀಡಿದೆಯೇ ; ನೀಡಿದ್ದಲ್ಲಿ, ಕಾಲಮಿತಿ ಎಷ್ಟು ;

(ಈ) ಮುಂಬರುವ ದಿನಗಳಲ್ಲಿ ಈ ರೀತಿ ತೊಂದರೆಗಳಾಗದಂತೆ ಸರ್ಕಾರವು ಕೈಗೊಂಡಿರುವ ಕಾರ್ಯಯೋಜನೆಗಳೇನು ? (ಪೂರ್ಣ ವಿವರ ನೀಡುವುದು)

## ಅವೈಜ್ಞಾನಿಕವಾಗಿ ರಸ್ತೆಗಳಲ್ಲಿ ಉಬ್ಬುಗಳನ್ನು ನಿರ್ಮಿಸಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೫ (೮೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹೆದ್ದಾರಿಗಳಲ್ಲಿ ಅವೈಜ್ಞಾನಿಕವಾಗಿ ರಸ್ತೆಗಳಲ್ಲಿ ಉಬ್ಬುಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಅವೈಜ್ಞಾನಿಕವಾಗಿ ಉಬ್ಬುಗಳನ್ನು ನಿರ್ಮಿಸಲು ಕಾರಣಗಳೇನು ;

(ಇ) ನ್ಯಾಯಾಲಯದ ಆದೇಶವಿದ್ದರೂ ಸಹ ಈ ರೀತಿ ರಸ್ತೆ ಉಬ್ಬುಗಳನ್ನು ನಿರ್ಮಿಸುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಅವೈಜ್ಞಾನಿಕವಾಗಿ ರಸ್ತೆ ಉಬ್ಬುಗಳನ್ನು ತೆರವುಗೊಳಿಸಲು ಸರ್ಕಾರದಿಂದ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ?

## ಚಾರಿತ್ರಿಕ ಹಿನ್ನೆಲೆಯ ಪ್ರಸಿದ್ಧ ದೇವಾಲಯಗಳ ಜೀರ್ಣೋದ್ಧಾರ ಕುರಿತು

**ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೬ (೮೮೯) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರ್ಮಿಕ ದತ್ತಿ ಇಲಾಖೆಯಡಿ ರಾಜ್ಯದ ವಿವಿಧ ಭಾಗಗಳಲ್ಲಿರುವ ಚಾರಿತ್ರಿಕ ಹಿನ್ನೆಲೆಯ ಪ್ರಸಿದ್ಧ ದೇವಾಲಯಗಳು ಶ್ರದ್ದಾ ಕೇಂದ್ರಗಳ ಜೀರ್ಣೋದ್ಧಾರಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಮಂಜೂರಾದ, ಬಿಡುಗಡೆಯಾದ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು ; (ಆದೇಶದೊಂದಿಗೆ ವಿವರ ನೀಡುವುದು)

(ಆ) ರಾಜ್ಯದ ನಾನಾ ಭಾಗಗಳಲ್ಲಿರುವ ಶತಮಾನಗಳ ಇತಿಹಾಸವಿರುವ ಪ್ರಾಚೀನ ದೇವಾಲಯುಗಳನ್ನು ಮುಜರಾಯಿ ಇಲಾಖೆ ಸ್ವಾಧೀನಪಡಿಸಿ ಧಾರ್ಮಿಕ ಪ್ರವಾಸೋದ್ಯಮ ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯಡಿ ಬರುವ ರಾಜ್ಯದ ಪ್ರಸಿದ್ಧ ದೇವಾಲಯಗಳ ಕಳೆದೆರಡು ವರ್ಷಗಳ ಆದಾಯವೆಷ್ಟು? (ಜಿಲ್ಲಾವಾರು ದೇವಾಲಯಗಳ ಆದಾಯ, ಹುಂಡಿ ಸಂಗ್ರಹ, ಆನ್‌ಲೈನ್ ಸೇವೆ ಇತ್ಯಾದಿ ಆದಾಯದ ಮೂಲಗಳ ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಮೀನುಗಾರಿಕಾ ಅಭಿವೃದ್ಧಿ ನಿಗಮ ಅನುಷ್ಠಾನದ ಕುರಿತು

**ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೭ (೮೨೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ಅನುಷ್ಠಾನಕ್ಕೆ ಬಂದಿದ್ದು ಯಾವಾಗ ; ಅದರ ಧ್ಯೇಯೋದ್ದೇಶಗಳೇನು ;

(ಆ) ಈ ನಿಗಮಕ್ಕೆ ಇದುವರೆಗೂ ಸರ್ಕಾರವು ನೀಡಿದ ಅನುದಾನದ ಮೊತ್ತ ಎಷ್ಟು ; ಅನುದಾನವನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಲಾಗಿದೆ ;

(ಇ) ಮೀನುಗಾರರಿಗೆ ಅನುಕೂಲವಾಗುವ ಹಾಗೆ ನಿಗಮವು ರೂಪಿಸಿರುವ ಯೋಜನೆಗಳು ಯಾವುವು ?

## ಕೃಷಿ ಯಂತ್ರ ಉಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ನೀಡುವ ಕುರಿತು

**ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೮ (೮೨೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಕೃಷಿ ಯಾಂತ್ರಿಕ ಉಪಕರಣಗಳು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ರೈತರಿಗೆ ಅನುಕೂಲವಾಗುವಂತೆ ಸದರಿ ಕೃಷಿ ಯಾಂತ್ರಿಕ ಉಪಕರಣಗಳ ಕೇಂದ್ರಗಳನ್ನು ಕೃಷಿ ಕೇಂದ್ರ ಹೋಬಳಿ, ಗ್ರಾಮ ಪಂಚಾಯಿತಿ ಸ್ಥಾನಗಳಲ್ಲಿ ತೆರೆಯಲಾಗಿದೆಯೇ ;

(ಇ) ಈ ಕೃಷಿ ಯಾಂತ್ರಿಕ ಉಪಕರಣ ಕೇಂದ್ರಗಳಲ್ಲಿ ರೈತರಿಗೆ ಯಾವ ಯಾವ ಯಾಂತ್ರಿಕ ಸಲಕರಣೆಗಳನ್ನು ಒದಗಿಸಲಾಗಿದೆ ; (ಮಾಹಿತಿ ನೀಡುವುದು)

(ಈ) ಇತ್ತೀಚಿನ ಆಧುನಿಕ ಕೃಷಿ ಯಾಂತ್ರಿಕ ಉಪಕರಣಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಒದಗಿಸಿ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಕೃಷಿ ಅವಲಂಬಿತ ರೈತರಿಗೆ ನೀಡುವ ಯೋಜನೆಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೩೯ (೮೫೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿಯನ್ನು ಅವಲಂಬಿಸಿರುವ ರೈತ ಕುಟುಂಬಗಳ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ ;

(ಆ) ಸರ್ಕಾರದಿಂದ ಉಚಿತವಾಗಿ ನೀಡಲಾಗಿರುವ ಬಿತ್ತನೆ ಬೀಜಗಳು ಹಾಗೂ ರಾಸಾಯನಿಕ ಗೊಬ್ಬರ ಮತ್ತು ಸಾವಯವ ಗೊಬ್ಬರಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೆಲವು ಕಂಪನಿಗಳು ರೈತರಿಗೆ ಕಲಬೆರಕೆ ಬಿತ್ತನೆ ಬೀಜಗಳನ್ನು ಪೂರೈಸುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಎರೆಹುಳು ಗೊಬ್ಬರಕ್ಕೆ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾಲಯದಲ್ಲಿ ಬೇರೆ ದರಗಳನ್ನು ನಿಗದಿ ಮಾಡಿ ಮಾರಾಟ ಮಾಡುತ್ತಿರುವ ಹಾಗೂ ತಾರತಮ್ಯ ಹೊಂದಿರುವ ಬಗ್ಗೆ ಮಾಹಿತಿ ನೀಡುವುದು ;

(ಉ) ರೈತರಿಗೆ ರಿಯಾಯಿತಿ ದರದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಪಡೆದುಕೊಳ್ಳಲು ಇರುವ ಮಾನದಂಡಗಳೇನು ?

(ಇ) ಕೆಲವು ಕಂಪನಿಗಳು ರೈತರಿಗೆ ಕಲಬೆರಕೆ ಬಿತ್ತನೆ ಬೀಜಗಳನ್ನು ಪೂರೈಸುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಎರೆಹುಳು ಗೊಬ್ಬರಕ್ಕೆ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾಲಯದಲ್ಲಿ ಬೇರೆ ದರಗಳನ್ನು ನಿಗದಿ ಮಾಡಿ ಮಾರಾಟ ಮಾಡುತ್ತಿರುವ ಹಾಗೂ ತಾರತಮ್ಯ ಹೊಂದಿರುವ ಬಗ್ಗೆ ಮಾಹಿತಿ ನೀಡುವುದು ;

(ಉ) ರೈತರಿಗೆ ರಿಯಾಯಿತಿ ದರದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಪಡೆದುಕೊಳ್ಳಲು ಇರುವ ಮಾನದಂಡಗಳೇನು ?

## ಮಾಗಡಿ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೪೦ (೮೫೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಗಳು ಮತ್ತು ರಾಜ್ಯ ಹೆದ್ದಾರಿಗಳು ಎಷ್ಟು ; (ಮಾಹಿತಿ ನೀಡುವುದು)

(ಆ) ಮಾಗಡಿ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ರಸ್ತೆಯು ಎಲ್ಲಿಂದ ಎಲ್ಲಿಗೆ ಸಂಪರ್ಕ ಕಲ್ಪಿಸುತ್ತದೆ ಎಂಬ ಮಾಹಿತಿ ನೀಡುವುದು ;

(ಈ) ಮಾಗಡಿ ರಸ್ತೆಯನ್ನು ಮೇಲ್ದರ್ಜೆಗೇರಿಸುವಲ್ಲಿ ಅಗತ್ಯ ಭೂಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಇದರ ಬಗ್ಗೆ ವಿವರ ನೀಡುವುದು ?

## ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯ ಮತ್ತು ನಿಲಯ ಪಾಲಕರ ಬಗ್ಗೆ

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೪೧ (೮೬೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ರಾಜ್ಯಾದ್ಯಂತ ಇರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹೊಸದಾಗಿ ವಸತಿ ನಿಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದಲ್ಲಿ ಇದೆಯೇ ; ಇದ್ದಲ್ಲಿ, ಎಲ್ಲೆಲ್ಲಿ ಎಷ್ಟು ವಸತಿ ನಿಲಯಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಇ) ಎಲ್ಲಾ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸಲು ನಿಲಯ ಪಾಲಕರನ್ನು ನೇಮಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ನಿಲಯ ಪಾಲಕರ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಎಲ್ಲಾ ವಸತಿ ನಿಲಯಗಳಲ್ಲಿ ಮೂಲಸೌಕರ್ಯದ ವ್ಯವಸ್ಥೆ ಸಮರ್ಪಕವಾಗಿ ಇದೆಯೇ ; ಇಲ್ಲದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೬೪೨ (೮೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಸಂಖ್ಯೆ ಎಷ್ಟು ; ಅವುಗಳು ಎಷ್ಟು ಕಿ.ಮೀ. ವ್ಯಾಪ್ತಿಯನ್ನು ಒಳಗೊಂಡಿವೆ ; (ವಿವರ ನೀಡುವುದು)

(ಆ) ಬೆಂಗಳೂರು–ಮೈಸೂರು ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಿದ್ದು, ರಸ್ತೆ ಅಗಲೀಕರಣ ಕಾಮಗಾರಿಯ ಪ್ರಗತಿಯ ವರದಿ ನೀಡುವುದು ; ಇದಕ್ಕಾಗಿ ಎಷ್ಟು ಅನುದಾನವನ್ನು ಮೀಸಲಿರಿಸಲಾಗಿದೆ ;

(ಇ) ರಾಜ್ಯಾದ್ಯಂತ ಇರುವ ರಾಜ್ಯ ಹೆದ್ದಾರಿಗಳ ಸಂಖ್ಯೆ ಎಷ್ಟು ; ಅವುಗಳು ಎಷ್ಟು ಕಿ.ಮೀ. ಉದ್ದವನ್ನು ಹೊಂದಿವೆ ; (ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಪ್ರಮುಖವಾಗಿ ಎಷ್ಟು ಜಿಲ್ಲಾ ರಸ್ತೆಗಳಿವೆ ; ಅವುಗಳಲ್ಲಿ ರಾಜ್ಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ?

## ಸರ್ವೇಯರ್‌ಗಳ ಮಾಹಿತಿ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೩ (೮೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಒಟ್ಟು ಇರುವ ಸರ್ವೇಯರ್ ಹುದ್ದೆಗಳು ಎಷ್ಟು ; ಈ ಹುದ್ದೆಗಳಿಗೆ ಭರ್ತಿಯಾಗಿರುವ ಹಾಗೂ ಖಾಲಿ ಇರುವ ಸರ್ವೇಯರ್‌ಗಳು ಎಷ್ಟು ; (ವಿವರ ನೀಡುವುದು)

(ಆ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸರ್ವೇಯರ್‌ಗಳ ಕೊರತೆ ಎಷ್ಟಿದೆ ?

## ಕನಕಪುರ ತಾಲ್ಲೂಕಿನ ಹಾರೋಹಳ್ಳಿಯ ಹೊಸ ತಾಲ್ಲೂಕು ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೪ (೮೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿ ಹಿಂದಿನ ಸರ್ಕಾರದ ಅವಧಿಯಲ್ಲಿ ಹಾರೋಹಳ್ಳಿಯನ್ನು ತಾಲ್ಲೂಕು ಕೇಂದ್ರವೆಂದು ಘೋಷಣೆ ಮಾಡಿ ಮಂಜೂರಾದ ತಾಲ್ಲೂಕು ಕೇಂದ್ರದ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ಇದು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಬೆಂಗಳೂರು ದಿಂಡಿಗಲ್ ಎನ್.ಹೆಚ್–೨೦೯ ರಸ್ತೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೫ (೮೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಎನ್.ಹೆಚ್. ೨೦೯ ಬೆಂಗಳೂರು–ಕನಕಪುರ ಚತುಷ್ಪಥ ರಸ್ತೆ ಸಮರ್ಪಕವಾಗಿ ಮುಗಿಯದೇ ಈ ಭಾಗದಲ್ಲಿ ದಿನ ನಿತ್ಯ ಪ್ರಯಾಣಿಸುವ ಸಾರ್ವಜನಿಕರಿಗೆ ವಿಳಂಬದಿಂದ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ವಿಳಂಬಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಎನ್.ಹೆಚ್–೨೦೯ ಬೆಂಗಳೂರು–ದಿಂಡಿಗಲ್ ರಸ್ತೆಗಾಗಿ ಒಟ್ಟು ಭೂಸ್ವಾಧೀನದ ಜಮೀನು ಎಷ್ಟು ; ಇದರಲ್ಲಿ ಸರ್ಕಾರಿ ಜಮೀನು ಎಷ್ಟು ; ಅರಣ್ಯ ಇಲಾಖೆ ಜಮೀನು ಎಷ್ಟು ; ಹಿಡುವಳಿ ಜಮೀನುಗಳು ಎಷ್ಟು ; ಹಾಗೂ ಇನ್ನೂ ಯಾವುದಾದರೂ ಭೂ ಸ್ವಾಧೀನಗೊಳ್ಳದೇ ತಕರಾರುಗಳು ಇರುವ ಜಮೀನುಗಳು ಏನಾದರೂ ಇದೆಯೇ ? (ವಿವರ ನೀಡುವುದು)

## ದರಖಾಸ್ತು ಜಮೀನುಗಳ ಪೌತಿ ಆಂದೋಲನದ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೬ (೮೦೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಯಲ್ಲಿ ದರಖಾಸ್ತು ಪೌತಿ ಆಂದೋಲನದ ನಂತರ ದುರಸ್ಥಿಯಾದ ಜಮೀನುಗಳೆಷ್ಟು ;

(ಆ) ಏಕ ವ್ಯಕ್ತಿ ಪ್ರಕರಣದಡಿ ದುರಸ್ಥಿಗೊಂಡ ಜಮೀನುಗಳೆಷ್ಟು ; ಇವುಗಳಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು ; ಇದಕ್ಕೆ ಇರುವ ನಿಯಮಾವಳಿಗಳೇನು ; ಇದರಿಂದ ಸಾರ್ವಜನಿಕರಿಗೆ ತೊಂದರೆ/ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಪೂರ್ಣ ಮಾಹಿತಿ ನೀಡುವುದು)

## ವಸತಿ ಯೋಜನೆಯ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದಿರುವ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೪೭ (೭೯೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ವಿವಿಧ ವಸತಿ ಯೋಜನೆಗಳಲ್ಲಿ ಆಯ್ಕೆಯಾದ ಗ್ರಾಮೀಣ ಭಾಗದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಯೋಜನೆ ಅನ್ವಯ ಪೂರ್ಣಗೊಂಡ ಮನೆಗಳು ಎಷ್ಟು; ಅಪೂರ್ಣಗೊಂಡ ಮನೆಗಳೆಷ್ಟು ;

(ಇ) ವಸತಿ ಯೋಜನೆಯ ಫಲಾನುಭವಿಗಳಿಗೆ ಕಳೆದ ನಾಲ್ಕು–ಐದು ತಿಂಗಳುಗಳಿಂದ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಶೀಘ್ರ ಅನುದಾನ ಬಿಡುಗಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಡಗು ಜಿಲ್ಲೆಗೆ ವಸತಿ ಇಲಾಖೆಯಿಂದ ನೀಡಿರುವ ಮನೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೮ (೬೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಕೊಡಗು ಜಿಲ್ಲೆಗೆ ವಸತಿ ಇಲಾಖೆಯಿಂದ ವಿವಿಧ ಯೋಜನೆಗಳಲ್ಲಿ ನೀಡಲಾದ ಮನೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸಾಮಾನ್ಯ ಮತ್ತು ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಪ್ರತ್ಯೇಕ ವಿವರ ನೀಡುವುದು;

(ಆ) ಕಳೆದ ವರ್ಷದ ಮಳೆಯಿಂದ ಕೊಚ್ಚಿಹೋದ ಗ್ರಾಮಗಳ ಜನರಿಗೆ ಎಷ್ಟು ಮನೆಗಳನ್ನು ಕಟ್ಟಿಸಲಾಗಿದೆ; ಇವುಗಳಲ್ಲಿ ಎಷ್ಟನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆ; (ವಿವರಗಳನ್ನು ನೀಡುವುದು)

(ಇ) ಈ ಮನೆಗಳನ್ನು ಕಟ್ಟಲು ಸರ್ಕಾರದಿಂದ ನೀಡಲಾದ ಅನುದಾನ ಎಷ್ಟು ಹಾಗೂ ಜಿಲ್ಲೆಯಲ್ಲಿ ಫಲಾನುಭವಿಗಳಿಗೆ ನೀಡಲಾಗಿರುವ ಸಹಾಯಧನವೆಷ್ಟು ? (ವಿವರಗಳನ್ನು ನೀಡುವುದು)

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಯಗಳನ್ನಾಗಿ ಘೋಷಿಸುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೬೪೯ (೮೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ರಾಜ್ಯದ ಯಾವ ಯಾವ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಅಥವಾ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವ ರಾಷ್ಟ್ರೀಯ ಹೆದ್ದಾರಿಗಳು ಎಷ್ಟು ಕಿ.ಮೀಗಳನ್ನು ಒಳಗೊಂಡಿರುತ್ತವೆ; ಇವುಗಳ ಅಭಿವೃದ್ಧಿಗೆ ಅಂದಾಜಿಸಿರುವ ಅಂದಾಜು ಮೊತ್ತವೆಷ್ಟು; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರ ಎಷ್ಟು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳೆಂದು ಘೋಷಿಸಿದೆ; ಆ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಎಷ್ಟು ಅನುದಾನವನ್ನು ಒದಗಿಸಿದೆ ? (ಸಂಪೂರ್ಣ ಮಾಹಿತಿಯನ್ನು ಆದೇಶದ ಪ್ರತಿಯೊಂದಿಗೆ ನೀಡುವುದು)

## ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ಜಾರಿಗೊಳಿಸಲಾಗುತ್ತಿರುವ ವಸತಿ ಯೋಜನೆಗಳ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೬೫೦ (೮೪೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮೂಲಕ ಪಿ.ಎಮ್.ಜಿ.ಎ.ವೈ., ವಾಜಪೇಯಿ, ಬಸವ, ರಾಜೀವ್ ಗಾಂಧಿ, ದೇವರಾಜ್ ಅರಸು, ಅಂಬೇಡ್ಕರ್, ಇಂದಿರಾ ಅವಾಜ್ ಮುಂತಾದ ಯೋಜನೆಗಳಡಿಯಲ್ಲಿ ವಸತಿ ರಹಿತರಿಗೆ ಎಷ್ಟು ಮನೆಗಳನ್ನು ಮಂಜೂರು ಮಾಡಿದೆ; (ಜಿಲ್ಲಾವಾರು ಮತ್ತು ಯೋಜನಾವಾರು ಮಾಹಿತಿ ನೀಡುವುದು)

(ಆ) ಈ ಹಲವಾರು ಯೋಜನೆಗಳಡಿಯಲ್ಲಿ ಕೈಗೊಂಡ ಮನೆಗಳ ನಿರ್ಮಾಣದ ಪ್ರಗತಿ ಯಾವ ಯಾವ ಹಂತದಲ್ಲಿದೆ;

(ಇ) ಫಲಾನುಭವಿಗಳಿಗೆ ೩ ತಿಂಗಳ ಒಳಗೆ ಮನೆಗಳ ನಿರ್ಮಾಣ ಮಾಡಬೇಕು ಎಂಬ ಷರತ್ತು ವಿಧಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಷರತ್ತುನ್ನು ಪೂರೈಸದೆ ಇರುವ ಪ್ರಕರಣಗಳು ಎಷ್ಟು ಮತ್ತು ಎಷ್ಟು ಪ್ರಕರಣಗಳಲ್ಲಿ ಮಂಜೂರಾತಿಯನ್ನು ರದ್ದುಮಾಡಲಾಗಿದೆ; (ಜಿಲ್ಲಾವಾರು ಮತ್ತು ಯೋಜನಾವಾರು ಮಾಹಿತಿ ನೀಡುವುದು)

(ಈ) ಫಲಾನುಭವಿಗಳು ಯಾವ ಯಾವ ಕಾರಣದ ಹಿನ್ನಲೆಯಲ್ಲಿ ಮನೆಗಳ ನಿರ್ಮಾಣ ಕೈಗೊಳ್ಳಲು ಸಾಧ್ಯವಾಗದ ಬಗ್ಗೆ ಸರ್ಕಾರ ಅಧ್ಯಯನ ನಡೆಸಲಾಗಿದೆಯೇ; ಹಾಗಿದ್ದಲ್ಲಿ, ಸಕಾರಣವಿದ್ದು ಮತ್ತು ಫಲಾನುಭವಿಗಳ ಸಾಮರ್ಥ್ಯ ಮೀರಿ ಉದ್ಭವಿಸಿರುವ ಸಮಸ್ಯೆಗಳನ್ನು ಪರಿಗಣನೆಗೆ ತೆಗೆದುಕೊಳ್ಳದೆ ಮಂಜೂರಾತಿ ರದ್ದು ಮಾಡಿರುವುದು ಸರಿಯಾದ ಕ್ರಮವೇ; ಈ ಹಿನ್ನಲೆಯಲ್ಲಿ ಸರ್ಕಾರ ವಿಧಿಸಿರುವ ಷರತ್ತುಗಳನ್ನು ಸಡಿಲಗೊಳಿಸಲು ಪುನರ್ ಪರಿಶೀಲಿಸುವುದೇ ? (ಸ್ಪಷ್ಟ ಮತ್ತು ನಿಖರವಾದ ಉತ್ತರ ನೀಡುವುದು)

## ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಮನೆಗಳ ನಿರ್ಮಾಣದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೬೫೧ (೮೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯವನ್ನು ಗುಡಿಸಲು ಮುಕ್ತ ಮಾಡುವ ಸರ್ಕಾರದ "ವಸತಿ ಯೋಜನೆಗಳು" ವಾರ್ಷಿಕ ಗುರಿ ತಲುಪಲು ವಿಳಂಬವಾಗುತ್ತಿರುವುದು ನಿಜವೇ;

(ಆ) ಪ್ರಸಕ್ತ ವರ್ಷದಲ್ಲಿ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳಾವುವು; ೨೦೧೭-೨೦೧೮ ಮತ್ತು ೨೦೧೮-೨೦೧೯ರ ಸಾಲಿನಲ್ಲಿ ರಾಜ್ಯ ಸರ್ಕಾರವು ವಿವಿಧ ವಸತಿ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲು ಗುರಿ ಹೊಂದಿರುತ್ತದೆ;

(ಇ) ಮೇಲ್ಕಂಡ ವರ್ಷಗಳಲ್ಲಿ ಫಲಾನುಭವಿಗಳು ನಿರ್ಮಿಸಿಕೊಂಡಿರುವ ಮನೆಗಳು ಎಷ್ಟು; ಮತ್ತು ಫಲಾನುಭವಿಗಳು ಪೂರ್ಣಗೊಳಿಸದೆ ಅಪೂರ್ಣಗೊಂಡಿರುವ ಮನೆಗಳಾವುವು; (ವರ್ಷವಾರು ಹಾಗೂ ಯೋಜನಾವಾರು ವಿವರ ನೀಡುವುದು)

(ಈ) ಅಪೂರ್ಣಗೊಂಡಿರುವ ಮನೆಗಳನ್ನು ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು;

(ಉ) ಸದರಿ ಯೋಜನೆಗಳ ಅಡಿಯಲ್ಲಿ ವಸತಿ ಸಮಿತಿಯು ಆಯ್ಕೆ ಮಾಡಿದ ವಿಶೇಷ ವರ್ಗದ ಫಲಾನುಭವಿಗಳು (ಅಂಗವಿಕಲರು ಹಾಗೂ ವಿಧವೆಯರು) ಸೂಕ್ತ ಸಮಯದಲ್ಲಿ ಸಹಾಯ ಧನ ಮತ್ತು ಬ್ಯಾಂಕ್ ಸಾಲ ಲಭ್ಯವಾಗದೇ ಅತಂತ್ರವಾಗಿದ್ದು ಈ ಅತಂತ್ರ ಸ್ಥಿತಿಯಲ್ಲಿದವರಿಗೆ ನ್ಯಾಯ ಒದಗಿಸುವ ಸಲುವಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ಭೂ ಕಬಳಿಕೆ ನಿಷೇಧ ಕಾಯಿದೆ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೫೨ (೮೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೂಗಳ್ಳರ ವಿರುದ್ಧ ಕಾನೂನು ಕ್ರಮ ಜರುಗಿಸಲು ಕರ್ನಾಟಕ ಭೂ ಕಬಳಿಕೆ ನಿಷೇಧ ಕಾಯಿದೆಯನ್ನು ಯಾವಾಗ ಜಾರಿಗೊಳಿಸಲಾಯಿತು;

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿ ಈ ಕಾಯಿದೆ ಅನ್ವಯ ಪ್ರಕರಣಗಳ ತ್ವರಿತ ವಿಚಾರಣೆಗಾಗಿ ವಿಶೇಷ ನ್ಯಾಯಾಲಯವನ್ನು ಯಾವಾಗ ಸ್ಥಾಪನೆ ಮಾಡಲಾಯಿತು ಮತ್ತು ಎಷ್ಟು ಪೀಠಗಳಲ್ಲಿ ಈ ನ್ಯಾಯಾಲಯಗಳು ಕಾರ್ಯನಿರ್ವಹಿಸುತ್ತಿವೆ;

(ಇ) ನ್ಯಾಯಾಲಯದ ವ್ಯಾಪ್ತಿ ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗಿದ್ದು, ಸದರಿ ನ್ಯಾಯಾಲಯವನ್ನು ರಾಜ್ಯವ್ಯಾಪ್ತಿಗೆ ವಿಸ್ತರಿಸಿ ವಿಚಾರಣೆಗೆ ನಿಗದಿಪಡಿಸಿರುವುದರಿಂದ ಸಮಸ್ಯೆ ಯಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿಲ್ಲವೆ; ಬಂದಿದ್ದಲ್ಲಿ, ಹೆಚ್ಚುವರಿ ಪೀಠಗಳನ್ನು ತೆರೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಬಲಾಢ್ಯ ಭೂಗಳ್ಳರ ತಂಟೆಗೆ ಹೋಗದ ಕಂದಾಯ ಅಧಿಕಾರಿಗಳು ಅಲ್ಪ ಸ್ವಲ್ಪ ಸರ್ಕಾರಿ ಭೂಮಿ ಸಾಗುವಳಿ ಮಾಡಿಕೊಂಡಿದ್ದ ಬಡ ರೈತರ ಮೇಲೆ ಕಾನೂನು ಅಸ್ತ್ರ ಪ್ರಯೋಗ ಮಾಡಿ, ಸಣ್ಣ ಮತ್ತು ಮಧ್ಯಮ ಬಡ ರೈತರಿಗೆ ಭೂಗಳ್ಳರ ಹಣೆಪಟ್ಟಿ ಕಟ್ಟಿ ಜೈಲು ಶಿಕ್ಷೆಗೂ ಗುರಿಯಾಗುವ ಸನ್ನಿವೇಶಗಳು ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ;

(ಉ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಘಟಪ್ರಭಾ ನದಿಯ ಪ್ರವಾಹದಿಂದ ಹಾನಿಗೊಳಗಾದ ಕಬ್ಬು ಬೆಳಗಾರರಿಗೆ ಪರಿಹಾರ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೩ (೬೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಘಟಪ್ರಭಾ ನದಿಯ ಪ್ರವಾಹದಿಂದಾಗಿ ಹಾನಿಗೊಳಗಾದ ಕಬ್ಬು ಇಳುವರಿ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶದಲ್ಲಿ ಬೆಳೆಯಬಹುದಾದ ಕಬ್ಬಿನ ಒಟ್ಟು ಪ್ರಮಾಣವೆಷ್ಟು;

(ಆ) ಪ್ರವಾಹದಿಂದ ನಷ್ಟಗೊಂಡ ಕಬ್ಬು ಬೆಳೆಗಾರರಿಗೆ ಸರ್ಕಾರ ನೀಡಿರುವ ಪರಿಹಾರದ ಮೊತ್ತವೆಷ್ಟು; ಈ ಪರಿಹಾರ ಮೊತ್ತವು ಸಂಬಂಧಿಸಿದ ಕಬ್ಬು ಬೆಳೆಗಾರರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಸದಾಶಿವ ಆಯೋಗದ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೪ (೬೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನ್ಯಾಯಮೂರ್ತಿ ಸದಾಶಿವ ಆಯೋಗವನ್ನು ರಚನೆ ಮಾಡಿದ್ದು ಯಾವಾಗ; ಆಯೋಗವು ವರದಿಯನ್ನು ನೀಡಲು ತೆಗೆದುಕೊಂಡ ಕಾಲಾವಕಾಶವೆಷ್ಟು;

(ಆ) ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು; (ದರ್ಜೆವಾರು ವಿವರ ನೀಡುವುದು)

(ಇ) ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು ಯಾವಾಗ; ಆಯೋಗವು ನೀಡಿರುವ ವರದಿಯನ್ನು ಜಾರಿಗೊಳಿಸಲು ಇರುವ ಅಡೆತಡೆಗಳೇನು; ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?

## ಕಲಬುರಗಿ ಜಿಲ್ಲೆಯಲ್ಲಿರುವ ಕೊಳಚೆ ಪ್ರದೇಶಗಳ ಕುರಿತು

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :–**

೬೫೫ (೭೯೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಘೋಷಿತ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಇಲ್ಲಿ ವಾಸಿಸುತ್ತಿರುವ ನಿವಾಸಿಗಳು ಬೇಡಿಕೆ ಮೇಲೆ ಮನೆ ಯೋಜನೆ ಅಡಿಯಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದಾರೆಯೇ; ಎಷ್ಟು ಜನರಿಂದ ಅರ್ಜಿಗಳು ಸಲ್ಲಿಸಲ್ಪಟ್ಟಿವೆ ;

(ಇ) ಅರ್ಜಿ ಸಲ್ಲಿಸಿದವರಿಗೆ ಸೂರು ಒದಗಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಅನುಷ್ಠಾನವಾಗುತ್ತಿರುವ ಕಾಮಗಾರಿಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೬೫೬ (೮೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೮ ಮತ್ತು ೨೦೧೯ನೇ ವರ್ಷದಲ್ಲಿ ಸಂಭವಿಸಿದ ಭೂಕುಸಿತ ಹಾಗೂ ಪ್ರವಾಹದಿಂದ ಲೋಕೋಪಯೋಗಿ ಇಲಾಖೆಯ ಅಡಿಯಲ್ಲಿ ಬರುವ ಹಲವಾರು ರಸ್ತೆ ಮತ್ತು ಸೇತುವೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೯–೨೦೨೦ನೇ ಆರ್ಥಿಕ ವರ್ಷದಲ್ಲಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಸದರಿ ಕಾಮಗಾರಿಗಳಿಗೆ ನಿಗಧಿಯಾಗಿರುವ ಅನುದಾನವೆಷ್ಟು ; ಇದುವರೆವಿಗೂ ಬಿಡುಗಡೆಯಾಗಿರುವ ಅನುದಾನದ ವಿವರಗಳೇನು; ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ?

## ಬೆಳೆ ಸಮೀಕ್ಷೆ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೭ (೭೯೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಬೆಳೆದ ಬೆಳೆಗಳನ್ನು ಕ್ಷೇತ್ರವಾರು ಸರ್ವೆ ಮೂಲಕವೇ ದಾಖಲಿಸಬೇಕೆಂಬ ಸೂಚನೆಯನ್ನು ಧಿಕ್ಕರಿಸಿ, ಕಛೇರಿಯಲ್ಲಿಯೇ ಅಪ್ಡೇಟ್ ಮಾಡಿದ ಪರಿಣಾಮವಾಗಿ ಹಲವಾರು ರೈತರು ಬೆಂಬಲ ಬೆಲೆ, ಫಸಲ್ ಭೀಮಾ ಮತ್ತಿತರ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದ ರೈತರು ಆಯಾ ಪ್ರದೇಶಕ್ಕೆ ಅನುಗುಣವಾಗಿ ಜಮೀನಿನಲ್ಲಿ ಬೆಳೆದಿರುವ ಬೆಳೆಗಳಾದ ರಾಗಿ, ಜೋಳ, ತೊಗರಿ, ಭತ್ತ, ಶೇಂಗಾ ಮತ್ತಿತರ ಬೆಳೆಗಳನ್ನು ರೈತರು ಬೆಳೆದಿದ್ದರೂ, ಸಮೀಕ್ಷೆಯಲ್ಲಿ ಖಾಲಿ ಜಾಗ ಎಂದು ನಮೂದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರೈತರು ಬೆಳೆದ ಮುಂಗಾರು ಬೆಳೆಯ ಸಮೀಕ್ಷೆಯ ವರದಿಯು ರೈತರಿಗೆ ಸಂಕಷ್ಟ ತಂದಿದ್ದು, ತಪ್ಪು ಉಲ್ಲೇಖವಾಗಿರುವ ಬೆಳೆಗಳ ಬಗ್ಗೆ ಪರಿಶೀಲನೆ ನಡೆಸುವ ಕಾರ್ಯ ಯಾವ ಹಂತದಲ್ಲಿದೆ ? (ವಿವರ ಒದಗಿಸುವುದು)

## ಬೀದರ್ ಜಿಲ್ಲೆಯ ವಿದ್ಯಾರ್ಥಿ ನಿಲಯಗಳ ಮೂಲಭೂತ ಸೌಲಭ್ಯ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೬೫೮ (೭೯೧) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳು ಮೂಲಭೂತ ಸೌಲಭ್ಯಗಳಿಲ್ಲದೆ (ಸ್ನಾನ ಗೃಹ, ಶೌಚಾಲಯಗಳ ಕೊರತೆ) ತೀವ್ರವಾದ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಿದ್ಯಾರ್ಥಿ ನಿಲಯಗಳಲ್ಲಿರುವ ಮಕ್ಕಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಬೀದರ್ ಜಿಲ್ಲೆಯ ಎಷ್ಟು ವಿದ್ಯಾರ್ಥಿ ನಿಲಯಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿವೆ; ಸರ್ಕಾರದಿಂದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಎಷ್ಟು ಅನುದಾನ ಒದಗಿಸಲಾಗಿದೆ; ಅನುದಾನ ಸಮರ್ಪಕವಾಗಿ ಬಳಕೆ ಮಾಡದಿರಲು ಕಾರಣವೇನು ? (ತಾಲ್ಲೂಕುವಾರು ವಿವರ ಒದಗಿಸುವುದು)

## ವಸತಿ ಯೋಜನೆಗಳ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೯ (೭೯೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೭-೧೮, ೨೦೧೮-೨೦೧೯ನೇ ಸಾಲಿನಲ್ಲಿ ರಾಜೀವ್‌ಗಾಂಧಿ ವಸತಿ ಯೋಜನೆ, ಡಾ॥ ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ ಹಾಗೂ ಬಸವ ವಸತಿ ಯೋಜನೆ ಅಡಿಯಲ್ಲಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ; ವಸತಿ ಯೋಜನೆ ಅಡಿಯಲ್ಲಿ ಎಷ್ಟು ಅರ್ಜಿಗಳು ಬಂದಿವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಬೀದರ್ ಜಿಲ್ಲೆಯಲ್ಲಿ ಅರ್ಹ ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡಲು ಸರ್ಕಾರ ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ ; (ವಿವರ ಒದಗಿಸುವುದು)

(ಇ) ಬೀದರ್ ಜಿಲ್ಲೆಯಲ್ಲಿ ವಸತಿ ಯೋಜನೆ ಅಡಿಯಲ್ಲಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡದಿರಲು ಕಾರಣವೇನು ; ಹಂಚಿಕೆ ಮಾಡಲಾಗುವುದು ಯಾವಾಗ ?

## ಕೃಷಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೦ (೬೨೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯಲ್ಲಿ ಕೃಷಿ ಇಲಾಖೆಯು ಮೂಲಕ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಯಾವುವು ;

(ಆ) ಕೃಷಿ ಇಲಾಖೆಯ ವಿವಿಧ ಯೋಜನೆಗಳಿಗೆ ಕಳೆದ ೩ ವರ್ಷಗಳಲ್ಲಿ ಕಾಯ್ದಿರಿಸಿ, ಖರ್ಚಾದ ಅನುದಾನ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು, ಯೋಜನೆ ಮತ್ತು ವರ್ಷವಾರು ವಿವರ ನೀಡುವುದು)

(ಇ) ಕೃಷಿ ಇಲಾಖೆಯ ಯೋಜನೆಗಳನ್ನು ಜನರಿಗೆ ತಲುಪಿಸಲು ಯೋಜನೆಗಳ ಪ್ರಚಾರಕ್ಕಾಗಿ ಹಾಗೂ ಪಾರದರ್ಶಕವಾಗಿ ಫಲಾನುಭವಿಗಳ ಆಯ್ಕೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; (ಸವಿಸ್ತಾರ ವರದಿ ನೀಡುವುದು)

(ಈ) ಕೃಷಿ ಇಲಾಖೆಯ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಸಿಬ್ಬಂದಿ ಕೊರತೆ ಇರುವುದು ನಿಜವೇ; ಸಿಬ್ಬಂದಿ ನೇಮಕಾತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಲೋಕೋಪಯೋಗಿ ಇಲಾಖೆಯಿಂದ ವಿಶೇಷ ಘಟಕ ಯೋಜನೆಯ ಕಾರ್ಯಗಾರ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೧ (೬೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಲೋಕೋಪಯೋಗಿ ಇಲಾಖಾ ವತಿಯಿಂದ ೨೦೧೬–೧೭ನೇ ಸಾಲಿನಿಂದ ಇಲ್ಲಿಯವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿಶೇಷ ಘಟಕ ಯೋಜನೆ (ಎಸ್.ಸಿ.ಪಿ ಮತ್ತು ಐ.ಎಸ್.ಪಿ) ಅಡಿಯಲ್ಲಿ ಮೀಸಲಿಟ್ಟ ಹಣ ಎಷ್ಟು; ಈ ಅವಧಿಯಲ್ಲಿ ಖರ್ಚು ಮಾಡಿದ ಹಣ ಎಷ್ಟು; (ಜಿಲ್ಲಾವಾರು / ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಎಲ್ಲೆಲ್ಲಿ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ; (ಜಿಲ್ಲಾವಾರು / ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಕಳೆದ ೫ ವರ್ಷಗಳಿಂದ ಸುಧಾರಣೆ ಬಗ್ಗೆ ಬಂದಿರುವ ಅನುದಾನ ಸಂಬಂಧಿಸಿದ ಅಧಿಕಾರಿಗಳು ಯಾವುದಾದರು ಕಾಮಗಾರಿ ತೋರಿಸಿ ಸಂಪೂರ್ಣ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ಸಾರ್ವಜನಿಕರಿಂದ ದೂರು ಬಂದಿರುವುದರ ಬಗ್ಗೆ ಸರ್ಕಾರ ಸೂಕ್ತ ತನಿಖೆ ಮಾಡುವುದೇ ; (ವಿವರ ನೀಡುವುದು)

(ಈ) ಸದರಿ ಸುಧಾರಣೆ ಬಗ್ಗೆ ಬಂದಿರುವ ಅನುದಾನವನ್ನು ಯಾವ ಯಾವ ಸ್ಥಳದಲ್ಲಿ ಯಾವ ಯಾವ ಕಾಮಗಾರಿಗೆ ಬಳಸಲಾಗಿದೆ ? (ಗುತ್ತಿಗೆದಾರರ ಹೆಸರಿನೊಂದಿಗೆ ಸವಿಸ್ತಾರ ವರದಿ ನೀಡುವುದು ಹಾಗೂ ತಾಲ್ಲೂಕುವಾರು/ ಜಿಲ್ಲಾವಾರು ೫ ವರ್ಷಗಳ ವರದಿ ನೀಡುವುದು)

## ಹಳಿಯಾಳದಿಂದ ತಾಟವಾಳದವರೆಗಿನ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೨ (೬೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಹಳಿಯಾಳದಿಂದ ತಾಟವಾಳ ತನಕ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು ಹಾಳಾಗಿದ್ದು, ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಹಾಳಾಗಿರುವ ರಸ್ತೆ ರಿಪೇರಿ ಕಾರ್ಯಕ್ಕೆ ಎಷ್ಟು ಅನುದಾನ ಮಂಜೂರಾಗಿರುತ್ತದೆ; (ಸವಿಸ್ತಾರ ವರದಿ ನೀಡುವುದು)

(ಇ) ಸದರಿ ರಸ್ತೆ ಕಾಮಗಾರಿ ಕುರಿತು ಟೆಂಡರ್ ಕರೆಯಲಾಗಿದೆಯೇ; (ವಿವರ ನೀಡುವುದು)

(ಈ) ಸದರಿ ರಸ್ತೆ ಕಾಮಗಾರಿ ಟೆಂಡರ್‌ನ್ನು ಯಾವ ಗುತ್ತಿಗೆದಾರ ಪಡೆದುಕೊಂಡಿರುತ್ತಾರೆ; ಹಾಗೂ ಸದರಿಯವರು ರಸ್ತೆ ಕಾಮಗಾರಿ ಎಂದಿನಿಂದ ಪ್ರಾರಂಭ ಮಾಡುತ್ತಾರೆ; ಪ್ರಾರಂಭ ಮಾಡಿದ್ದಲ್ಲಿ, ಯಾವಾಗ ಕಾಮಗಾರಿ ಮುಗಿಯುತ್ತದೆ; ಸದರಿ ಗುತ್ತಿಗೆದಾರರಿಗೆ ಅನುದಾನ ಬಟವಾಡೆ ಮಾಡಿರುತ್ತಾರೆಯೇ ? (ಸವಿಸ್ತಾರ ವರದಿ ನೀಡುವುದು)

## ಲೋಕೋಪಯೋಗಿ ಇಲಾಖೆಯಲ್ಲಿ ನಡೆಯುವ ಕಾಮಗಾರಿಯ ಅವ್ಯವಹಾರದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೩ (೭೯೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಿಂದ ಕಾರವಾರ ಜಿಲ್ಲೆಯ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಇಲ್ಲಿಯವರೆಗೆ ನೀಡಲಾದ ಅನುದಾನವನ್ನು ಶೀರ್ಷಿಕೆವಾರು ನೀಡುವುದು; ಹಾಗೂ ಸದರಿ ಅನುದಾನಕ್ಕೆ ಕೈಗೊಂಡ ಕಾಮಗಾರಿಗಳು ಯಾವುವು; ವಿವರ ನೀಡುವುದು; (ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ ಪ್ರತಿ ಹಾಗೂ ಕಾಮಗಾರಿಯ ಪೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ನಡೆದಿದ್ದು, ಇದರಿಂದಾಗಿ ಸರ್ಕಾರದಿಂದ ಬಂದಿರುವ ಅನುದಾನ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಿಸಿದ ಅಧಿಕಾರಿಯ ಮೇಲೆ ಸೂಕ್ತ ತನಿಖೆ ಮಾಡಿಸಿ ಕ್ರಮ ಜರುಗಿಸಲಾಗುವುದೇ ?

## ಲೋಕೋಪಯೋಗಿ ಇಲಾಖೆ ರಸ್ತೆಗಳು ತುಂಬ ಹಾಳಾಗಿರುವ ಬಗ್ಗೆ

**ಡಾ॥ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೪ (೮೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳು ತುಂಬ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕ್ಷೇತ್ರಕ್ಕೆ ಲೆಕ್ಕ ಶೀರ್ಷಿಕೆ ಅಪೆಂಡಿಕ್ಸ್ –ಇ ಇತರೆ ಯಾವುದೇ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಮಂಜೂರಾಗಿರುವ ಅನುದಾನದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; ತಡೆಹಿಡಿದಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಹಾಗಿದ್ದಲ್ಲಿ, ಅನುದಾನವನ್ನು ತಡೆಹಿಡಿದಿರುವುದರಿಂದ ಕ್ಷೇತ್ರದ ಅಭಿವೃದ್ಧಿಗೆ ಕುಂಠಿತವಾಗುವುದಿಲ್ಲವೇ; ಇದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ತಡೆಹಿಡಿದಿರುವ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಳೆದ ೩ ವರ್ಷಗಳಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೫ (೮೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಗಳಿಗೆ ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಯಾವ ಯಾವ ಸಮುದಾಯ ಭವನಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಹಣದ ಕೊರತೆಯಿಂದ ಅರ್ಧದಲ್ಲಿಯೇ ಕಾಮಗಾರಿ ಸ್ಥಗಿತಗೊಂಡಿರುವ ಸಮುದಾಯ ಭವನಗಳೆಷ್ಟು? (ಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೇಲ್ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೬ (೮೧೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖಾ ಅಧೀನದಲ್ಲಿ ಬರುವ ಆಶ್ರಮ ಶಾಲೆಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು, ಏಕಲವ್ಯ ಮಾದರಿ ವಸತಿ ಶಾಲೆಗಳು ಯಾವುವು; (ವಿವರ ನೀಡುವುದು)

(ಆ) ಆಶ್ರಮ, ಮೊರಾರ್ಜಿ ದೇಸಾಯಿ, ಅಟಲ್ ಬಿಹಾರಿ ವಾಜಪೇಯಿ, ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿನ ಮಕ್ಕಳಿಗೆ ಎಲ್ಲಾ ಸವಲತ್ತುಗಳನ್ನು ಉಚಿತವಾಗಿ ನೀಡಲಾಗುತ್ತಿದೆಯೇ; ನೀಡುತ್ತಿದ್ದಲ್ಲಿ, ಆ ಸೌಲಭ್ಯಗಳು ಯಾವುವು ? (ವಿವರ ನೀಡುವುದು)

## ಮಾರಾಟ/ಖರೀದಿ ನೋಂದಣಿಯಲ್ಲಿ ಅವ್ಯವಹಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೭ (೬೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯ನೇ ಸಾಲಿನಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ತಿಗಳ ಮಾರಾಟ/ಖರೀದಿ ನೋಂದಣಿಯನ್ನು ಎಷ್ಟು ಸಮಯದವರೆಗೆ ನಿಷೇಧಿಸಲಾಗಿತ್ತು; ಮತ್ತು ಯಾವ ಕಾರಣಕ್ಕೆ ನಿಷೇಧಿಸಲಾಗಿತ್ತು;

(ಆ) ಮಾರ್ಚ್, ೨೦೧೮ಕ್ಕೆ ಕೊನೆಗೊಂಡ ಆರ್ಥಿಕ ವರ್ಷಕ್ಕೆ ಸಂಬಂಧಿಸಿದ ಸಿಎಜಿ ವರದಿಯಲ್ಲಿ ಬೆಂಗಳೂರು ನಗರ ಜಿಲ್ಲೆ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ಸ್ಥಿರಾಸ್ತಿ ಮಾರಾಟ/ಖರೀದಿ ನೋಂದಣಿ ಮಾಡಿರುವುದರಿಂದ ಮುದ್ರಾಂಕ ಮತ್ತು ನೋಂದಣಿ ಶುಲ್ಕ

೪೫೦ ಕೋಟಿಗೂ ಹೆಚ್ಚು ಮೊತ್ತ ಸರ್ಕಾರಕ್ಕೆ ನಷ್ಟವಾಗಿರುವ ಬಗ್ಗೆ ವರದಿಯಾಗಿದ್ದು, ಈ ಅವ್ಯವಹಾರದಲ್ಲಿ ಪಾಲ್ಗೊಂಡ ಉಪ ನೋಂದಣಾಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮವೇನು ?

## ಗೋಮಾಳ ಜಾಗದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೮ (೬೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಗೋಮಾಳ ಜಾಗವು ಲಭ್ಯವಿದೆ ; ಜಿಲ್ಲಾವಾರು ವಿಸ್ತೀರ್ಣದೊಂದಿಗೆ ಮಾಹಿತಿ ನೀಡುವುದು ;

(ಆ) ಗೋಮಾಳ ಸ್ಥಳವನ್ನು ಯಾವ ಯಾವ ಉದ್ದೇಶಗಳಿಗೆ ಬಳಕೆ ಮಾಡಲಾಗುತ್ತಿದೆ ;

(ಇ) ಗೋಮಾಳ ಸ್ಥಳವನ್ನು ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಲು ಇರುವ ನಿಯಮಗಳೇನು ; ಯಾವ ಯಾವ ಉದ್ದೇಶಗಳಿಗೆ ಗೋಮಾಳ ಜಾಗವನ್ನು ಮಂಜೂರು ಮಾಡಬಹುದು ; (ವಿವರ ನೀಡುವುದು)

(ಈ) ಕಳೆದ ಐದು ವರ್ಷಗಳಲ್ಲಿ ಎಷ್ಟು ಸಂಘ ಸಂಸ್ಥೆಗಳಿಗೆ ಗೋಮಾಳ ಜಾಗವನ್ನು ಮಂಜೂರು ಮಾಡಲಾಗಿದೆ ; ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಸ್ಥಿರಾಸ್ಥಿಗಳ ನೋಂದಣಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೯ (೬೩೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ಥಿಗಳನ್ನು ನೋಂದಣಿ ಮಾಡಲು ಎಷ್ಟು ಕಛೇರಿಗಳನ್ನು ಹೊಂದಿವೆ ; (ವಿಳಾಸದೊಂದಿಗೆ ವಿವರ ನೀಡುವುದು)

(ಆ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ಥಿಗಳನ್ನು ಸರ್ಕಾರ ನಿಗಧಿ ಪಡಿಸಿದ ನೋಂದಣಿ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಆಸ್ತಿಗಳ ನೋಂದಣಿ ಮಾಡುವ ಮೂಲಕ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವ ಎಷ್ಟು ಪ್ರಕರಣಗಳು ಕಳೆದ ೫ ವರ್ಷದಿಂದ ಬೆಳಕಿಗೆ ಬಂದಿವೆ ; (ವಿಭಾಗವಾರು ವಿವರ ನೀಡುವುದು)

(ಇ) ನಿಗಧಿತ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ನೋಂದಣಿ ಮಾಡಿದ ನೋಂದಣಾಧಿಕಾರಿಯವರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು ; ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಬರ ಪರಿಹಾರಕ್ಕೆ ನಿಗಧಿ ಪಡಿಸಿದ ಕಾರ್ಯಕ್ರಮ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೦ (೬೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯ ವಿಪತ್ತು ನಿರ್ವಹಣಾ ವಿಭಾಗದಲ್ಲಿ ಬರ ಪರಿಹಾರಕ್ಕೆ ನಿಗಧಿ ಪಡಿಸಿದ ಕಾರ್ಯಕ್ರಮಗಳಾವುವು ; ಕಳೆದ ೬ ತಿಂಗಳಿನಿಂದ ವಿಪತ್ತು ನಿರ್ವಹಣಾ ವಿಭಾಗದಲ್ಲಿ ಬರ ಪರಿಹಾರಕ್ಕೆ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿಪತ್ತು ನಿರ್ವಹಣಾ ವಿಭಾಗದಲ್ಲಿ ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಬಹುದು ; (ವಿವರ ನೀಡುವುದು)

(ಇ) ವಿಪತ್ತು ನಿರ್ವಹಣಾ ವಿಭಾಗದಲ್ಲಿ ಬರ ಪರಿಹಾರದ ಅನುದಾನದಿಂದ ಕುಡಿಯುವ ನೀರಿನ ಕುರಿತ ಎಷ್ಟು ಕಾಮಗಾರಿಗಳನ್ನು ಕಳೆದ ೨ ವರ್ಷಗಳಲ್ಲಿ ನಿರ್ವಹಿಸಲಾಗಿದೆ ; ಯಾವ ಯಾವ ಕಾಮಗಾರಿಗಳನ್ನು ನಿರ್ವಹಿಸಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ವಿಪತ್ತು ನಿರ್ವಹಣಾ ವಿಭಾಗದಲ್ಲಿ ಬರ ಪರಿಹಾರದ ಅನುದಾನದಿಂದ ಕುಡಿಯುವ ನೀರಿಗಾಗಿ ಕೆರೆಗಳನ್ನು ಅಭಿವೃದ್ಧಿಪಡಿಸಲು ವೆಚ್ಚ ಮಾಡಿದ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ನೋಂದಣಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೧ (೬೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೆಸ್ಟೇಜ್ ಟೆಕ್ ಪಾರ್ಕ್ ೩ ಎಂಬ ಹೆಸರಿನಲ್ಲಿ ೨೦೧೪–೧೫ರಲ್ಲಿ ವರ್ತೂರು ಹೋಬಳಿಯ ಬೆಳ್ಳಂದೂರು ಖಾನೆ ಗ್ರಾಮದ ಸರ್ವೆ ಸಂಖ್ಯೆಗಳಾದ ೧೧೦/೧, ೧೧೦/೨, ೧೧೦/೩ ರಲ್ಲಿ ನಿರ್ಮಿಸಿದ ವಾಣಿಜ್ಯ ಸಂಕೀರ್ಣದ ವಾಣಿಜ್ಯ ಬ್ಲಾಕುಗಳನ್ನು ೧೩೫ ವಿವಿಧ ಗ್ರಾಹಕರುಗಳಿಗೆ ಸರ್ಕಾರವು ನಿಗಧಿಪಡಿಸಿದ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ನೋಂದಣಿ

ಮಾಡಿರುವ ತಪ್ಪಿತಸ್ಥ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಉದ್ದೇಶ ಪೂರ್ವಕವಾಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಅಧಿಕಾರಿಯನ್ನು ಅಮಾನತ್ತುಗೊಳಿಸದಿರಲು ಕಾರಣವೇನು ;

(ಆ) ದುರುದ್ದೇಶ ಪೂರ್ವಕವಾಗಿ ಪ್ಲಾನ್ ಮಾಡಿ ರೂ.೧೦೩.೫ ಕೋಟಿ ನಷ್ಟ ಉಂಟು ಮಾಡಿರುವ ಅಧಿಕಾರಿಯಿಂದಲೇ ಸದರಿ ಮೊತ್ತವನ್ನು ವಸೂಲು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ೨೦೧೪–೧೫ರಲ್ಲಿ ವರ್ತೂರು ಹೋಬಳಿಯ ಬೆಳ್ಳಂದೂರು ಖಾನೆ ಗ್ರಾಮದ ಸರ್ವೆ ಸಂಖ್ಯೆಗಳಾದ ೧೧೦/೧, ೧೧೦/೨, ೧೧೦/೩ರಲ್ಲಿ ನಿರ್ಮಿಸಿದ ವಾಣಿಜ್ಯ ಸಂಕೀರ್ಣದ ವಾಣಿಜ್ಯ ಬ್ಲಾಕುಗಳನ್ನು ೧೩೫ ವಿವಿಧ ಗ್ರಾಹಕರುಗಳಿಗೆ ಸರ್ಕಾರವು ನಿಗಧಿಪಡಿಸಿದ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ನೋಂದಣಿ ಮಾಡಿರುವುದು ಸಾಬೀತಾಗಿರುವುದರಿಂದ ಈ ನೋಂದಣಿಯನ್ನು ರದ್ದುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸಂಬಂಧಿತ ಕಂಪನಿಯವರು ಕೊರತೆ ಶುಲ್ಕವನ್ನು ಪಾವತಿಸಲು ಹೊರಡಿಸಿರುವ ಆದೇಶದ ವಿರುದ್ಧ ಮಾತ್ರವೇ ಅಪೀಲು ಮಾಡಿ ತಡೆಯಾಜ್ಞೆ ಪಡೆದುಕೊಂಡಿರುವುದರಿಂದ ಈ ಅಪೀಲು ಇತ್ಯರ್ಥವಾಗುವವರೆಗೆ ಮಾರಾಟ ನೋಂದಣಿಯುನ್ನು ಅಮಾನತ್ತಿನಲ್ಲಿಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ಮತ್ತು ಸದರಿ ಕಟ್ಟಡಗಳಿಗೆ ನೀರಿನ ಸಂಪರ್ಕ ಮತ್ತು ವಿದ್ಯುತ್ ಸಂಪರ್ಕ ಕಡಿತಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ?

## ಗೋಮಾಳದ ಜಮೀನು ಮಂಜೂರಾತಿ ಕುರಿತು

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೬೭೨ (೭೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಗೋಮಾಳ ಜಮೀನುಗಳನ್ನು ಹೇಗೆ ಮತ್ತು ಯಾರಿಗೆ ಮಂಜೂರು ಮಾಡಲಾಗುವುದು ; ಮತ್ತು ಯಾವ ಕಾಯ್ದೆ ಅಥವಾ ಕಾನೂನಿನಡಿ ಮಂಜೂರು ಮಾಡಲಾಗುವುದು ; (ಪ್ರತಿ ಒದಗಿಸುವುದು)

(ಆ) ಈ ಜಮೀನುಗಳ ಮಂಜೂರಾತಿಯಲ್ಲಿ ನಿಗಧಿಪಡಿಸಿರುವ ಮಾನದಂಡಗಳೇನು ; ಎಷ್ಟು ಎಕರೆ ವಿಸ್ತೀರ್ಣದ ಜಮೀನು ಮಂಜೂರು ಮಾಡಬಹುದಾಗಿರುತ್ತದೆ ;

(ಇ) ಬಗರ್ ಹುಕುಂ ಸಮಿತಿಯಲ್ಲಿ ಜಮೀನು ಮಂಜೂರು ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು ; ಮಂಜೂರಾತಿಗೆ ಯಾರು ಅರ್ಜಿ ಸಲ್ಲಿಸಬಹುದಾಗಿದೆ ; ಸಮಿತಿಯಲ್ಲಿ ಇರುವ ಸದಸ್ಯರುಗಳು ಯಾರು ;

(ಈ) ಜಮೀನುರಹಿತರು ಉಳುಮೆ ಮಾಡುತ್ತಿದ್ದಲ್ಲಿ ಅಂತಹವರಿಗೆ ಎಷ್ಟು ವಿಸ್ತೀರ್ಣದ ಜಮೀನು ಮಂಜೂರು ಮಾಡಬಹುದು ಅಥವಾ ಸ್ವಂತ ಜಮೀನಿಗೆ ಹೊಂದಿಕೊಂಡಂತಿರುವ ಹೆಚ್ಚುವರಿ ಗೋಮಾಳದ ಜಮೀನನ್ನು ಉಳುಮೆ ಮಾಡುತ್ತಿದ್ದರೆ ಅಂತಹವರಿಗೆ ಎಷ್ಟು ವಿಸ್ತೀರ್ಣದ ಜಮೀನು ಮಂಜೂರು ಮಾಡಬಹುದು ; ಮಾಹಿತಿ ನೀಡುವುದು ;

(ಉ) ಬಗರ್ ಹುಕುಂ ಸಮಿತಿಯ ಕಣ್ತಪ್ಪಿನಿಂದ ಅನರ್ಹರಿಗೆ ಜಮೀನು ಮಂಜೂರಾಗಿದ್ದ ಪಕ್ಷದಲ್ಲಿ ಕಾನೂನು ಪ್ರಕಾರ ಜಮೀನು ಹಿಂಪಡೆಯಲು ಸಾಧ್ಯವೇ ; ಸಾಧ್ಯವಾದಲ್ಲಿ, ಅದನ್ನು ಪಡೆಯುವುದು ಹೇಗೆ ; ಕಾಯ್ದೆಯ ಪ್ರತಿ ಒದಗಿಸುವುದು ?

## ಯಳಂದೂರು ಪ್ರವಾಸಿ ಪರಿವೀಕ್ಷಣಾ ಮಂದಿರದ ನಿರ್ವಹಣೆ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೩ (೬೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ೨೦೯ರ ಸಮೀಪ ಇರುವ ಲೋಕೋಪಯೋಗಿ ಇಲಾಖೆಯ ಯಳಂದೂರು ಪ್ರವಾಸಿ ಪರಿವೀಕ್ಷಣಾ ಮಂದಿರವು (ಐ.ಬಿ) ಸೂಕ್ತ ನಿರ್ವಹಣೆ ಇಲ್ಲದೇ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಪ್ರವಾಸಿ ಪರಿವೀಕ್ಷಣೆ ಮಂದಿರದ ರಿಪೇರಿ ನಿರ್ವಹಣೆಗೆ ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆ ಆಗಿರುವ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಪಿಠೋಪಕರಣಗಳ ಖರೀದಿಗೆ ಎಷ್ಟು ಹಣ ಬಿಡುಗಡೆ ಆಗಿದೆ ;

(ಇ) ಅನುದಾನ ಬಿಡುಗಡೆ ಆಗಿದ್ದರೂ ಕೂಡಾ ಸರಿಯಾದ ನಿರ್ವಹಣೆ ಇಲ್ಲದೆ, ಶಿಥೀಲವಾಗಿ ಮಳೆಗಾಲದಲ್ಲಿ ಸೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೂಡಲೇ ಸೂಕ್ತ ಕ್ರಮ ಕೈಗೊಂಡು ಕಟ್ಟಡವನ್ನು ದುರಸ್ಥಿ ಮಾಡಲು ಕ್ರಮ ಜರುಗಿಸಲಾಗುವುದೇ ?

# ಶಿವನಸಮುದ್ರದ ಬಳಿ ಇರುವ ಐತಿಹಾಸಿಕ ವೆಸ್ಲಿ ಸೇತುವೆಯನ್ನು ಪುನರ್ ನಿರ್ಮಾಣ ಮಾಡುವ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೪ (೬೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಳ್ಳೆಗಾಲ ತಾಲ್ಲೂಕು, ಶಿವನಸಮುದ್ರದ ಬಳಿ ಕಾವೇರಿ ನದಿಗೆ ಅಡ್ಡಲಾಗಿ ೧೮೩೨ರಲ್ಲಿ ನಿರ್ಮಿಸಿದ್ದ ಶತಮಾನಗಳ ಐತಿಹಾಸಿಕ ವೆಸ್ಲಿ ಸೇತುವೆ ಕೊಚ್ಚಿ ಹೋಗಿದ್ದು, ಇದರ ಪುನರ್ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಇದಕ್ಕಾಗಿ ಅನುದಾನವನ್ನು ನಿಗಧಿಪಡಿಸಿ ಬಿಡುಗಡೆ ಮಾಡಲಾಗಿದೆಯೇ ;

(ಆ) ಈ ಸೇತುವೆಯನ್ನು ಪುನರ್ ನಿರ್ಮಾಣ ಮಾಡಿ ಪ್ರವಾಸಿ ಆಕರ್ಷಣೆ ಹಾಗೂ ಪುರಾತತ್ವ ಸ್ಮಾರಕವಾಗಿ ಉಳಿಸಿಕೊಳ್ಳಲು, ಪುನರ್‌ವಿಮರ್ಶಿತ ಸೂಕ್ತ ಯೋಜನೆಯನ್ನು ರೂಪಿಸಿ, ಡಿ.ಪಿ.ಆರ್. ಮಾಡಿಸಿ, ಅಗತ್ಯವಾದ ಅನುದಾನ ಬಿಡುಗಡೆ ಮಾಡಿ ಕಾಮಗಾರಿಯನ್ನು ಆರಂಭಿಸಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0236/400 ಪ್ರತಿಗಳು/03–03–2020